# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 230 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 01–04–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 230 | Title- Code: KARKAN 28269 | Chitradurga | Date: 01-04-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮಹಿಳೆ ಅಡುಗೆ ಮಾಡೋಕೆ ಲಾಯಕ್ಕು ಹೇಳಿಕೆಗೆ ಗಾಯತ್ರಿ ಸಿದ್ದೇಶ್ವರ್ ತಿರುಗೇಟು 2

3ಕ್ಕೆ ಪಕ್ಷೇತರರಾಗಿ ನನ್ನ ಪುತ್ರ ನಾಮಪತ್ರ ಸಲ್ಲಿಕೆ: ಶಾಸಕ ಚಂದ್ರಪ್ಪ ಘೋಷಣೆ 3

ನಾನು ಜವಾಬ್ದಾರ ನೀವು ಜವಾಬ್ದಾರರು 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಚಂದ್ರಪ್ಪ ಗೆಲುವಿಗೆ ಹಗಲಿರುಳು ಶ್ರಮಿಸೋಣ: ಡಿ.ಸುಧಾಕರ್ ಕರೆ

# ಏ.4ಕ್ಕೆ ಚಂದ್ರಪ್ಪ ನಾಮಪತ್ರ ಸಲ್ಲಿಕೆ

## ಸರ್ಕಾದ ಸಾಧನೆಗಳನ್ನು ಜನರಿಗೆ ತಿಳಿಸಿ ಮತ ಕೇಳಿ –ಬಹಿರಂಗ ಸಭೆಗೆ ಸಿಎಂ ಡಿಸಿಎಂ ಭಾಗಿ

» ಚಿತ್ರದುರ್ಗ

ಕೇಂದ್ರ ಸರ್ಕಾರದಿಂದ ನಮ್ಮ ರಾಜ್ಯಕ್ಕೆ ಮಲತಾಯಿ ಧೋರಣೆ ಅನುಸರಿಸುತ್ತಿದ್ದು ಈ ಚುನಾವಣೆಯಲ್ಲಿ ನಾವು ಗೆಲುವು ಸಾಧಿಸಬೇಕಾಗಿದೆ, ಚಂದ್ರಪ್ಪ ಅವರನ್ನು ಅತ್ಯಧಿಕ ಮತಗಳಿಂದ ಗೆಲ್ಲಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕೇಂದ್ರದ ವಿರುದ್ಧ ಹರಿಹಾಯ್ದರು.

ನಗರದಲ್ಲಿನ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು.

ಕರ್ನಾಟಕರಾಜ್ಯಕ್ಕೆಕೇಂದ್ರಸರ್ಕಾರದಿಂದ ನಿರಂತರವಾಗಿ ಅನ್ಯಾಯವಾಗುತ್ತಿದೆ. ನಮ್ಮ ತೆರಿಗೆ ಹಣವನ್ನು ನಮ್ಮ ಪಾಲು ನಮಗೆ ನೀಡುತ್ತಿಲ್ಲ. ಬರಗಾಲ ಇದ್ದರು ಸಮರ್ಥವಾಗಿ ನಿರ್ವಹಣೆ ಮಾಡುತ್ತಿದ್ದೇವೆ.

ಚಂದ್ರಪ್ಪ ಅವರ ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಅತ್ಯಂತ ಹೆಚ್ಚಿನ ಕಾರ್ಯಕರ್ತರು ಭಾಗವಹಿಸಿ ಎಂದು ತಿಳಿಸಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ ಚುನಾವಣೆ ಕಾವು ಜೋರಾಗುತ್ತಿದೆ. ಏಪ್ರಿಲ್ ನಾಲ್ಕನೇ ತಾರೀಖು ಎಂ.ಎನ್.ಚಂದ್ರಪ್ಪ ಅವರು ನಾಮಪತ್ರ ಸಲ್ಲಿಸಲಿದ್ದಾರೆ ಎಂದರು.

ಬಿ.ಎನ್.ಚಂದ್ರಪ್ಪ ಅವರ ನಾಮಪತ್ರದಂದು ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಸೇರಿ ಕ್ಷೇತ್ರದ ಎಲ್ಲಾ ಶಾಸಕರು ಭಾಗವಹಿಸುತ್ತಾರೆ. ಈ ಚುನಾವಣೆಯಲ್ಲಿ ಸಾಮೂಹಿಕ ನಾಯಕತ್ವದಡಿ ಮಾಡಿ ಗೆಲುವು ಸಾಧಿಸುತ್ತೇನೆ.



ನೀಲಕಂಠೇಶ್ವರ ದೇವಸ್ಥಾನದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ಮತ್ತು ಓಲ್ಡ್ ಮಿಡಲ್ ಸ್ಕೂಲ್ ಶಾಲಾ ಮೈದಾನದಲ್ಲಿ ಬಹಿರಂಗ ಸಭೆ ನಡೆಸಲಾಗುತ್ತದೆ. ಅಲ್ಲಿ ಸಿಎಂ ಮತ್ತು ಡಿಸಿಎಂ ಮಾತನಾಡಲಿದ್ದಾರೆ.

ಚಿತ್ರದುರ್ಗ ಜಿಲ್ಲೆ ಕಾಂಗ್ರೆಸ್ ಭದ್ರಕೋಟೆಯಾಗಿದೆ. ಕಳೆದ ವಿಧಾನ ಸಭಾ ಚುನಾವಣೆಯಲ್ಲಿ 6 ಸ್ಥಾನ ಗೆಲುವು ಸಾಧಿಸುವ ನಂಬಿಕೆ ಇತ್ತು.ಆದರೆ ನಾನು ಮಾತ್ರ ಕಾರಣಂತರಗಳಿಂದ ಸೋಲು ಅನುಭವಿಸಿದ್ದೇನೆ. ಕಾಂಗ್ರೆಸ್ ಸರ್ಕಾರ ಗ್ಯಾರೆಂಟಿ ಯೋಜನೆಗಳನ್ನು ಸಮರ್ಥವಾಗಿ ನಿರ್ವಹಿಸುತ್ತಿದ್ದೇವೆ.

ಇಷ್ಟೊಂದು ಬರಗಾಲವಿದ್ದರು ಸಹ ಸಕಲ ಸಿದ್ದತೆ ಮಾಡಿಕೊಂಡು ಜನರನ್ನು ಗೂಳೆ ಹೋಗದಂತೆ ಜನರನ್ನು ಕಾಪಡಿಕೊಂಡಿದ್ದೇನೆ, ಗ್ಯಾರೆಂಟಿ ಯೋಜನೆಗಳು ನಮ್ಮ ಗೆಲುವಿಗೆ ಶ್ರೀರಕ್ಷೆಯಾಗಲಿದೆ. ಬಿಜೆಪಿ ಅವರು ಇದುವರೆಗೂ ಸಹ ಒಂದು ಜನಪರ ಕೆಲಸ ಮಾಡಿಲ್ಲ ಮತ್ತು ಅಪ್ಪರ್ ಭದ್ರಾ ಯೋಜನೆಗೆ ಒಂದು ರೂಪಾಯಿ ಕೊಡಲಿಲ್ಲ ಎಂದು ಬಿಜೆಪಿಯನ್ನು ಟೀಕಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಮಿಕ ವಿಭಾಗದ ಅಧ್ಯಕ್ಷ ಜಿ.ಎಸ್.ಮಂಜುನಾಥ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ತಾಜ್ ಪೀರ್, ಮುಖಂಡರಾದ ನರಸಿಂಹರಾಜು, ಸಂಪತ್ ಕುಮಾರ್, ಪ್ರಕಾಶ್ ಮೂರ್ತಿ, ಬಾಲರಾಜ್ , ಕಿರಣ್, ಮಧುಗೌಡ, ವೆಂಕಟೇಶ್,

ಚಳ್ಳಕೆರೆ ಶಾಸಕ ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ ನಮ್ಮ ಲೋಕಸಭಾ ಕ್ಷೇತ್ರದಲ್ಲಿ 8 ವಿಧಾನ ಸಭಾ ಕ್ಷೇತ್ರದಲ್ಲಿ 7 ಜನ ಕಾಂಗ್ರೆಸ್ ಶಾಸಕರಿದ್ದೇವೆ. ಕೇಂದ್ರ ಸರ್ಕಾರದಿಂದ ಎನ್‌ಡಿಆ[illegible]ಫ್ ನಿಂದ ಒಂದು ರೂಪಾಯಿ ಬಿಡುಗಡೆ ಮಾಡಿಲ್ಲ. ರಾಜ್ಯ ಸರ್ಕಾರ ದೆಹಲಿಗೆ ತೆರಳಿ ಕೇಂದ್ರದ ವಿರುದ್ಧ ಪ್ರತಿಭಟನೆ ಮಾಡಿದರು ಒಂದು ರೂಪಾಯಿ ಕೊಟ್ಟಿಲ್ಲ. ಭೀಕರ ಬರಗಾಲದಲ್ಲಿ ನಮ್ಮ ಸರ್ಕಾರ ಪ್ರತಿ ಕುಟುಂಬಕ್ಕೆ 2 ಸಾವಿರ ಹಣ ನೀಡುವ ಜೊತೆ ಬಲಗಾರವಿದ್ದರು ಜನರ ಜೊತೆಗಿದ್ದು ಜನರನ್ನು ಕಾಂಗ್ರೆಸ್ ಸರ್ಕಾರ ಕಾಪಾಡುತ್ತಿದೆ.

ಹೊಸದುರ್ಗ ಶಾಸಕ ಮತ್ತು ಆಹಾರ ನಿಗಮದ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ ಮಾತನಾಡಿ ಜಿಲ್ಲೆಯ ಎಲ್ಲಾ ಶಾಸಕರು ಮತ್ತು ಮಾಜಿ ಶಾಸಕರು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡುವ ಮೂಲಕ ಚಂದ್ರಪ್ಪ ಅವರ ಗೆಲುವಿಗೆ ಶ್ರಮಿಸಬೇಕು. ಕೇಂದ್ರ ಸರ್ಕಾರದಿಂದ ಐದು ಗ್ಯಾರೆಂಟಿ ಯೋಜನೆ ಜಾರಿ ಮಾಡಿದ್ದು ಕೇಂದ್ರ ಸರ್ಕಾರದ ಚುಕ್ಕಾಣಿ ಹಿಡಿಯುವ ಕೆಲಸ ಆಗಬೇಕಿದೆ. ಜನರ ಮನವೊಲಿಸಿ ಮತವನ್ನು ಕೊಡಿಸುವ ಕೆಲಸ ನಾವು ಮಾಡುತ್ತೇವೆ ಎಂದು ಹೇಳಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಮಾತನಾಡಿ ಕಳೆದ 10 ವರ್ಷಗಳಿಂದ ಕ್ಷೇತ್ರದ ಜನರ ಜೊತೆಗೆ ಇದ್ದೇನೆ. ನಾನು ಐದನೂರು ಕಿಲೋ ಮೀಟರ್ ದೂರದಿಂದ ಬಂದಿಲ್ಲ. ಹೊಸದುರ್ಗ ಪಕ್ಕದ ತರೀಕೆರೆ ತಾಲೂಕಿನವನು ನಾನು. ನನ್ನ ಏಕೆ ಮೂಡಿಗೆರೆ ಚಂದ್ರಪ್ಪ ಅಂತ ನನಗೆ ಗೊತ್ತಿಲ್ಲ.ನನ್ನೂರು ಮೂಡಿಗೆರೆ ಅಲ್ಲ ಎಂದರು.

ಪುಟ 2

## ಸಾಣೇಹಳ್ಳಿ ಶ್ರೀಗಳ ಆಶೀರ್ವಾದ ಪಡೆದ: ಕಾರಜೋಳ

**ಹೊಸದುರ್ಗ** : ತಾಲೂಕಿನ ಕಸಬಾ ಹೋಬಳಿಯ ಸಾಣೇಹಳ್ಳಿ ಶ್ರೀಮತಕ್ಕೆ ಮಾಜಿ ಉಪ ಮುಖ್ಯಮಂತ್ರಿ ಹಾಗೂ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಭೇಟಿ ನೀಡಿ, ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಗಳವರ ಆಶೀರ್ವಾದ ಪಡೆದುಕೊಂಡರು. ಇದೇ ಸಂದರ್ಭದಲ್ಲಿ ಪಂಡಿತಾರಾಧ್ಯ ಶ್ರೀಗಳು ಮಾತನಾಡಿ, ಇದುವರೆಗೂ ಚಿತ್ರದುರ್ಗ ಲೋಕಸಭಾ ಕ್ಷೇತ್ರ ಅಭಿವೃದ್ಧಿ ಆಗಿಲ್ಲ. ಯಾರೇ ಚುನಾವಣೆಯಲ್ಲಿ ಗೆದ್ದರೂ ಕ್ಷೇತ್ರದ ಅಭಿವೃದ್ಧಿಯ ಕಡೆ ಗಮನಹರಿಸಿಲ್ಲ. ಆದ್ದರಿಂದ ಮುಂಬರುವ ಚುನಾವಣೆಯಲ್ಲಿ ಯಾವುದೇ ಪಕ್ಷದ ಅಭ್ಯರ್ಥಿ ಗೆದ್ದರೂ ಕ್ಷೇತ್ರದ ಅಭಿವೃದ್ಧಿಯ ಕಡೆ ಹೆಚ್ಚು ಗಮನಹರಿಸಬೇಕೆಂದು ಹೇಳಿದರು. ಇದುವರೆಗೂ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿಗಳು ಹೊರಗಿನವರು. ಆದ್ದರಿಂದ ಕ್ಷೇತ್ರದ ಅಭಿವೃದ್ಧಿಯ ಕಡೆ ಗಮನಹರಿಸುವುದಕ್ಕೆ ಸಾಧ್ಯವಿಲ್ಲ ಎನ್ನುವ ಕೂಗು ಕೇಳಿಬರುತ್ತಿದೆ. ಆದ್ದರಿಂದ ಅದನ್ನು ಹುಸಿಗೊಳಿಸಿ ಕ್ಷೇತ್ರದ ಅಭಿವೃದ್ಧಿಯ ಕಡೆ ಗಮನಹರಿಸಬೇಕೆಂದು ಕಿವಿ ಮಾತು ಹೇಳಿದರು.



## ರೋಜಾ ಹೋಟೆಲ್ ಚೆಕ್‌ಪೋಸ್ಟ್ : ಕಾರಿನಲಿದ್ದ 1.80 ಲಕ್ಷ ಹಣ ವಶ

**ಚಳ್ಳಕೆರೆ:** ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕ್ಷೇತ್ರದಾದ್ಯಂತ ಹಣ ಹಾಗೂ ಇತರೆ ವಸ್ತುಗಳನ್ನು ಕಾನೂನು ಬಾಹಿರ, ಅನುಮತಿ ಇಲ್ಲದೆ ಸಾಗಾಟ ಮಾಡದಂತೆ ಎಚ್ಚರಿಕೆ ವಹಿಸಲಾಗಿದ್ದು ನಿಗದಿತ ಪ್ರದೇಶಗಳಲ್ಲಿ ಚೆಕ್‌ಪೋಸ್ಟ್ ನಿರ್ಮಿಸಿ ವಾಹನ ತಪಾಸಣಾ ಕಾರ್ಯ ಮುಂದುವರೆದಿರುತ್ತದೆ. ನಗರದ ಬೆಂಗಳೂರು ರಸ್ತೆಯಲ್ಲಿನ ರೋಜಾ ಹೋಟೆಲ್ ಚೆಕ್‌ಪೋಸ್ಟ್‌ನಲ್ಲಿ ಭಾನುವಾರ ಹಿರಿಯೂರು ಕಡೆಯಿಂದ ಚಳ್ಳಕೆರೆ ಕಡೆಗೆ ಬರುತ್ತಿದ್ದ ಕಾರು ತಡೆದು ತಪಾಸಣೆ ನಡೆಸಿದಾಗ ಕಾರಿನಲ್ಲಿ ದಾಖಲೆ ಇಲ್ಲದ 1.80 ಲಕ್ಷ ಹಣ ಪತ್ತೆಯಾಗಿದ್ದು, ಅದನ್ನು ಚುನಾವಣಾಧಿಕಾರಿಗಳು ವಶಪಡಿಸಿಕೊಂಡಿರುತ್ತಾರೆ. ಈ ಬಗ್ಗೆ ಪರಿಶೀಲನೆ ಮುಂದುವರೆದಿದ್ದು, ಹಣದ ಬಗ್ಗೆ ಮಾಹಿತಿ ನೀಡದಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ. ಮಾರ್ಚ್ 17ರಿಂದ ಚೆಕ್‌ಪೋಸ್ಟ್‌ಗಳ ಕಾರ್ಯಾಚರಣೆ ಆರಂಭವಾಗಿದ್ದು ಇದುಸೇರಿದಂತೆ ಒಟ್ಟು 3 ಪ್ರಕರಣ ವರದಿಯಾಗಿವೆ.

## ಪ್ರಮುಖ ಸುದ್ದಿ

### ಕಾಂಗ್ರೆಸ್ ಅಭ್ಯರ್ಥಿ ಹೇಳಿಕೆಗೆ ಪರಿಷತ್ ಸದಸ್ಯ ಆಕ್ರೋಶ

# ಅಪಪ್ರಚಾರ ಮೊದಲು ನಿಲ್ಲಿಸಿ: ನವೀನ್ ಎಚ್ಚರಿಕೆ

» ಚಿತ್ರದುರ್ಗ

ಕಾಂಗ್ರೆಸ್ ಅಭ್ಯರ್ಥಿ ಸಂವಿಧಾನಕ್ಕೆ ಅಪತ್ತು ಬಂದಿದೆ ಅದಕ್ಕೆ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಿ ಎಂದು ಹೇಳುತ್ತಾ ಮತಯಾಚನೆ ಮಾಡುತ್ತಿದ್ದಾರೆ.ಇದು ಕಳೆದ ಹತ್ತು ವರ್ಷಗಳಲ್ಲಿ ಅಪತ್ತು ಬಂದಿದೆಯೋ ಅಥವಾ ನೆಹರು ಕಾಲದಿಂದ ಆಡಳಿತ ನಡೆಸಿಕೊಂಡು ಬಂದ ಕಾಂಗ್ರೆಸ್‌ನಿಂದ ಅಪತ್ತು ಬಂದಿದೆಯೋ ಎಂದು ಮೊದಲು ತಿಳಿಯಬೇಕೆಂದು ವಿಧಾನ ಪರಿಷತ್ ಸದಸ್ಯ ಕೆ ಎಸ್ ನವೀನ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಚಂದ್ರಪ್ಪರವರನ್ನು ಪ್ರಶ್ನೆ ಮಾಡಿದರು.

ಚಿತ್ರದುರ್ಗನಗರದಲ್ಲಿಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಚುನಾವಣೆ ಗೆಲ್ಲಲು ಅಪತ್ತು ಬಂದಿದೆ ಎಂದು ಪ್ರಚಾರ ಮಾಡುತ್ತಿದ್ದೀರಿ, ನೆಹರು ಪ್ರಧಾನಿಯಾದಾಗ ರಾಜ್ಯದ ಎಲ್ಲಾ ಸಿಎಂಗಳಿಗೆ ಮೀಸಲಾತಿ ತೆಗೆದು ಹಾಕುವ ಬಗ್ಗೆ ಅಬಿಪ್ರಾಯ ತಿಳಿಸಲು ಪತ್ರ ಬರೆದಿದ್ದರು. ಇಂತಹ ಸುಳ್ಳು ಮತ್ತು ಅಪಪ್ರಚಾರ ಮಾಡುತ್ತೀರಿ, ಇದನ್ನು ಕೂಡಲೇ ನಿಲ್ಲಿಸಬೇಕು. ಅಂಬೇಡ್ಕರ್ ಅವರಿಗೆ ಮಾಡಿದ ಅವಮಾನವನ್ನು ಪ್ರಚಾರದಲ್ಲಿ ತಿಳಿಸುವ ಕೆಲಸ ಮಾಡುತ್ತೇವೆ. ಮತಗಳ ಆಸೆಗಾಗಿ ಸುಳ್ಳು ಪ್ರಚಾರವನ್ನುನಾವು ಖಂಡಿಸುತ್ತೇವೆ. ಸಿದ್ದರಾಮಯ್ಯ ಶೋಷಿತ ವರ್ಗಗಳ ಸಮಾವೇಶದಲ್ಲಿ ಮಾಡಿ ನಂತರ ಅಲ್ಪ ಸಂಖ್ಯಾತರಿಗೆ ಹಣ ಬಿಡುಗಡೆ ಮಾಡುತ್ತಾರೆ. ಹೆಜ್ಜೆ ಹೆಜ್ಜೆಗೂ ಕಾಂಗ್ರೆಸ್ ಸರ್ಕಾರ ಮತ್ತು ಪಕ್ಷ ಎಸ್ಸಿಗಳನ್ನು ದಮನ ಮಾಡುವ ಕೆಲಸ ಮಾಡುತ್ತಿದೆ.ಇದರ ಕರಾಳ ಮುಖವನ್ನು ಬಯಲು ಮಾಡುತ್ತೇವೆ.ಎಸ್ಸಿಗಳಿಗೆ ಆಗುತ್ತಿರುವ ಅನ್ಯಾಯವನ್ನು ತಾಕಿದ್ದರೆ ಮಾತಾಡಿ ಸರಿಪಡಿಸಿ ಎಂದು ಎಚ್ಚರಿಕೆ ನೀಡಿದರು.



ಸಂವಿಧಾನ ಕೊಟ್ಟಂತಹ ಹಕ್ಕನ್ನು ಉಲ್ಲಂಘನೆ ಮಾಡಿ ಹಲವು ಸರ್ಕಾರಗಳನ್ನು ಕಿತ್ತು ಹಾಕುವ ಕೆಲಸವನ್ನು ಶ್ರೀಮತಿ ಇಂದಿರಾಗಾಂಧಿ ಮಾಡಿದ್ದರು. ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಸೋಲಿಸಿದವರಿಗೆ ಪದ್ಮಶ್ರೀ ಕೊಟ್ಟು ಕಾಂಗ್ರೆಸ್ ಪಕ್ಷ ಗೌರವಿಸುತ್ತದೆ.ಬಾಬಾ ಸಾಹೇಬ್ ಅಂಬೇಡ್ಕರ್ ರವರ ಶವಸಂಸ್ಕಾರಕ್ಕೂ ಜಾಗ ಕೊಡದೆ ಇರುವಂತಹ ಪಕ್ಷ ಕಾಂಗ್ರೆಸ್ ಪಕ್ಷ.. ಅಂಬೇಡ್ಕರ್ ರವರಿಗೆ ಭಾರತ ರತ್ನ ಪ್ರಶಸ್ತಿ ನೀಡಲು ನಿರಾಸಕ್ತಿ ತೋರಿದ ಪಕ್ಷ ಕಾಂಗ್ರೆಸ್ ಪಕ್ಷ. ಮೀಸಲಾತಿ ತೆಗೆದುಹಾಕುವ ನಿಲುವನ್ನು ಹೊಂದಿದ್ದು ಕಾಂಗ್ರೆಸ್ ಪಕ್ಷ... ಬಿಜೆಪಿ ಪಕ್ಷ ರಾಷ್ಟ್ರದಲ್ಲಿ ಅಧಿಕಾರಕ್ಕೆ ಬಂದ 10 ವರ್ಷದಲ್ಲಿ ಅಂಬೇಡ್ಕರ್ ರವರಿಗೆ ವಿಶೇಷ ಗೌರವವನ್ನು ನೀಡಿದೆ ಎಂದರು.

ಚಂದ್ರಪ್ಪನವರೇ ನೀವು ಹೋದಲ್ಲಿ ಬಂದಲ್ಲಿ ಸಂವಿಧಾನ ಆಪತ್ತಿನಲ್ಲಿದೆ ಎಂದು ಸುಳ್ಳು ಸುಳ್ಳು ಅಪಪ್ರಚಾರ ಮಾಡುವುದನ್ನು ನಿಲ್ಲಿಸಿ.ನಾವು ಮುಂದಿನ ದಿನಗಳಲ್ಲಿ ಕಾಂಗ್ರೆಸ್‌ನ ಕರಾಳ ಮುಖವನ್ನು ಜನಜಾಗೃತಿಯ ಮೂಲಕ ತಿಳಿಸಲಿದ್ದೇವೆ. ಸಂವಿಧಾನ ಬಲಿಷ್ಠ ಸರ್ಕಾರದ ಸುರ್ಪದಿನಲ್ಲಿ ಕ್ಷೇಮವಾಗಿದೆ, ನಿಮ್ಮ ಹೇಳಿಕೆಯನ್ನು ಬಿಜೆಪಿ ಪಕ್ಷ ಖಂಡಿಸುತ್ತದೆ. ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಎಸ್. ಸಿ ಸಮುದಾಯವನ್ನು ದಮನ ಮಾಡುವ ಕೆಲಸ ಮಾಡುತ್ತಿದೆ..ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳ ನಡೆಯುತ್ತಿಲ್ಲ ಇಂತಹ ದುಸ್ಥಿತಿಗೆ ರಾಜ್ಯವನ್ನು ತಂದು ನಿಲ್ಲಿಸಿದ್ದಾರೆ.. ಮೊದಲು ಇದನ್ನು ಸರಿಪಡಿಸಿ ಅಪಪ್ರಚಾರ ಮಾಡುವುದನ್ನು ನಿಲ್ಲಿಸಿ, ಈ ಮೂಲಕ ಚಂದ್ರಪ್ಪ ರವರಿಗೆ ಎಚ್ಚರಿಕೆ ನೀಡುತ್ತಿದ್ದೇನೆ ಎಂದು ನವೀನ್ ತಿಳಿಸಿದರು.

ರಾಜ್ಯದಲ್ಲಿ 05 ಎಸ್. ಸಿ ಮೀಸಲು ಕ್ಷೇತ್ರಗಳಿವೆ ಅವುಗಳಲ್ಲಿ 02 ಎಡಗೈ, 01 ಬೋವಿ, 01 ಲಂಬಾಣಿ ಹಾಗೂ 01 ಚಲವಾದಿ ಸಮುದಾಯಕ್ಕೆ ಎಂದು ಹಂಚಿಕೆ ಮಾಡಲಾಗಿದೆ. ಕೋಲಾರ ಕ್ಷೇತ್ರವನ್ನು ಜೆಡಿಎಸ್ ಪಕ್ಷಕ್ಕೆ ಬಿಟ್ಟು ಕೊಟ್ಟಿರುವುದರಿಂದ ಅಲ್ಲಿ ಜೆಡಿಎಸ್ ಪಕ್ಷದ ಅಭ್ಯರ್ಥಿಯಾಗಿ ಭೋವಿ ಸಮುದಾಯದವರಿಗೆ ಟಿಕೆಟ್ ನೀಡಲಾಗಿದೆ.

ಪುಟ 2

## ಫಾಸ್ಟ್ ನ್ಯೂಸ್

### ವೇಗವಾಗಿ ಬಂದ ಕಾರು ಪಲ್ಟಿ: ಪೋಟೋಗ್ರಾಫರ್ ಸ್ಥಳದಲ್ಲೇ ಸಾವು

» ಚಳ್ಳಕೆರೆ

ತಾಲ್ಲೂಕು ತಳಕು ಠಾಣಾ ವ್ಯಾಪ್ತಿಯ ಚಿಕ್ಕಮ್ಮನಹಳ್ಳಿ ಬಳಿ ನಗರದ ಚಿತ್ರಯ್ಯನಹಟ್ಟಿಯ ಪೋಟೋಗ್ರಾಫರ್ ಒ.ಅಭಿಷೇಕ್(30) ರಾಯದುರ್ಗದಲ್ಲಿ ತನ್ನಪೋಟೋಶೂಟ್ ಮುಗಿಸಿಕೊಂಡು ವಾಪಾಸ್ ಬರುವಾಗ ಚಿಕ್ಕಮ್ಮನಹಳ್ಳಿ ಬಳಿ ಕಾರು ಕಂಬಕ್ಕೆ ಡಿಕ್ಕಿಯಾದ ಪರಿಣಾಮ ತೀವ್ರರಕ್ತಗಾಯಗಳಿಂದ ಅಭಿಷೇಕ್ ಸ್ಥಳದಲ್ಲೇ ಮೃತಪಟ್ಟಿರುತ್ತಾನೆ. ತಳಕು ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

### ಚಲಿಸುತ್ತಿದ್ದ ರೈಲಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡ ಯುವಕ

» ಚಳ್ಳಕೆರೆ

ತಾಲ್ಲೂಕಿನ ಸೋಮಗುದ್ದು ಗ್ರಾಮದ ಬಳಿ ಶನಿವಾರ ಬೆಳಗ್ಗೆ ಅದೇ ಗ್ರಾಮದ ತಿಪ್ಪೇಸ್ವಾಮಿ(28)ಎಂಬ ಯುವಕ ಚಲಿಸುತ್ತಿದ್ದ ರೈಲಿಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಜೀವನದಲ್ಲಿ ಜಿಗುಪ್ಸೆಯೇ ಆತ್ಮಹತ್ಯೆಗೆ ಕಾರಣ ಎನ್ನಲಾಗಿದೆ. ರೈಲ್ವೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ಧಾರೆ.

### ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮೇಲ್ವಿಚಾರಕರಿಂದಲೇ ನಕಲು: ನಾಲ್ವರನ್ನು ಅಮಾನತ್ತುಗೊಳಿಸಿದ ಡಿಡಿಪಿಐ ರವಿಶಂಕರರೆಡ್ಡಿ

» ಚಳ್ಳಕೆರೆ

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೇಲ್ವಿಚಾರಕರಾಗಿ ಕಾರ್ಯನಿರ್ವಹಿಸುತ್ತಿದ್ದ ನಾಲ್ವರು ಶಿಕ್ಷಕರು ನಕಲು ಮಾಡಲು ಅವಕಾಶ ನೀಡಿದರು ಎಂಬ ಆರೋಪದ ಮೇರೆಗೆ ಡಿಡಿಪಿಐ ರವಿಶಂಕರರೆಡ್ಡಿ ಅವರನ್ನು ಅಮಾನತ್ತುಗೊಳಿಸಿ ಆದೇಶಿಸಿದ್ದಾರೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕೊಠಡಿಗಳ ಮೇಲ್ವಿಚಾರಕರಾಗಿ ಕಾರ್ಯನಿರ್ವಹಿಸುತ್ತಿದ್ದ ಮಂಜರಿ ಹಿರಿಯಪ್ರಾಥಮಿಕ ಶಾಲೆಯ ಶಿಕ್ಷಕ ರೇವಣ್ಣ, ಗೋಸಿಕೆರೆ ಪ್ರೌಢಶಾಲಾ ಶಿಕ್ಷಕ ರಾಘವೇಂದ್ರ, ಪಿ.ಓಬನಹಳ್ಳಿ ಶಿಕ್ಷಕ ಚಂದ್ರಶೇಖರ, ಕೊರ್ಲಕುಂಟೆ ಶಿಕ್ಷಕ ಪ್ರಕಾಶ್‌ರವರನ್ನು ಅಮಾನತ್ತು ಮಾಡಿ ಆದೇಶಹೊರಡಿಸಿದ್ದಾರೆ.

### ಜೂಜಾಟವಾಡುತ್ತಿದ್ದ ಏಳು ಜನ ಹಾಗೂ ಹಣ ವಶ

» ಚಳ್ಳಕೆರೆ

ಪೊಲೀಸ್ ಇಲಾಖೆಯ ಎಚ್ಚರಿಕೆ ನಡುವೆಯೂ, ಕಣ್ಣು ತಪ್ಪಿಸಿ ಹಾಡುಹಗಲೇ ಸೋಮಗುದ್ದು ರಸ್ತೆಯ ಅರಣ್ಯ ಪ್ರದೇಶದಲ್ಲಿ ಜೂಜಾಟವಾಡುತ್ತಿದ್ದ ತಂಡದ ಮೇಲೆ ದಾಳಿ ನಡೆಸಿ ಹಣ, ಮೊಬೈಲ್ ಹಾಗೂ ಬೈಕ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಇನ್ಸ್‌ಪೆಕ್ಟರ್ ಕೆ.ಕುಮಾರ್ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಸಿಬ್ಬಂದಿಯೊಂದಿಗೆ ಸೋಮಗುದ್ದು ರಸ್ತೆಯ ಅರಣ್ಯ ಪ್ರದೇಶದ ಒಳಭಾಗದಲ್ಲಿ ತೆರಳಿದಾಗ ಮಣಿ ಮತ್ತು ಇತರೆ ಏಳು ಜನರುಗುಂಪುಕಟ್ಟಿಕೊಂಡುಜೂಜಾಟವಾಡುತ್ತಿದ್ದು, ಎಲ್ಲರನ್ನ ವಶಕ್ಕೆ ಪಡೆದು ಜೂಜಾಟದ ಹಣ 34690, ಐದು ಮೊಬೈಲ್, ನಾಲ್ಕು ಮೋಟಾರ್ ಬೈಕ್‌ಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಲಾಗಿದೆ. ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಂಗಾರದೇವರಹಟ್ಟಿ ಸಾರ್ವಜನಿಕ ರಸ್ತೆಯಲ್ಲಿ ಜೂಜಾಟವಾಡುತ್ತಿದ್ದ ಓಬಯ್ಯ ಇತರೆ ಮೂವರನ್ನು ವಶಕ್ಕೆ ಪಡೆದ ಪೊಲೀಸರು ಪ್ರಕರಣ ದಾಖಲಿಸಿ, ತನಿಖೆ ಮುಂದುವರೆಸಿದ್ಧಾರೆ.

## ಫಾಸ್ಟ್ ನ್ಯೂಸ್

### ಏ.4ಕ್ಕೆ ಚಂದ್ರಪ್ಪ ನಾಮಪತ್ರ ಸಲ್ಲಿಕೆ

» ಮೊದಲ ಪುಟದಿಂದ

ಕಳೆದ ಲೋಕಸಭೆ ಚುನಾವಣೆಯಲ್ಲಿ 27 ಕ್ಷೇತ್ರಗಳು ಸೋಲು ಕಾಣಬೇಕಾಯಿತು. ನಾನು 87 ಸಾವಿರ ಮತಗಳ ಅಂತರದಿಂದ ಸೋಲು ಕಂಡಿದ್ದೇನೆ. ನಾನು ಸೋತರು ಸಹ ಗೆಲುವು ಕಂಡವರಿಗಿಂತ ಹೆಚ್ಚು ಜನರ ಜೊತೆಗಿದ್ದು ಕೆಲಸ ಮಾಡಿದ್ದೇನೆ. ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಜಿಲ್ಲೆಯ ಎಲ್ಲಾ ನಾಯಕರ ಸಲಹೆಯಂತೆ ನನಗೆ ಈ ಬಾರಿ ಟಿಕೆಟ್ ನೀಡಿದ್ದಾರೆ. ಕೇಂದ್ರದ ವಿತ್ತ ಸಚಿವೆ ನಿರ್ಮಾಲ ಸೀತರಾಮನ್ ಅವರು ರಾಷ್ಟ್ರೀಯ ಯೋಜನೆ ಘೋಷಣೆ ಮಾಡಿದರು ಸಹ ಒಂದು ರೂಪಾಯಿ ಬಿಡುಗಡೆ ಮಾಡಲಿಲ್ಲ. ಚಿತ್ರದುರ್ಗಕ್ಕೆ ಡಬಲ್ ಇಂಜಿನ್ ಸರ್ಕಾರ ಕೊಟ್ಟಿದ್ದೇನೆ ಎಂದು ಜಿಲ್ಲೆಯ ಜನರು ಏನು ಕೊಡುಗೆ ನೀಡಿದರು. ಮೆಡಿಕಲ್ ಕಾಲೇಜು ನಿರ್ಮಾಣಕ್ಕೆ ಘೋಷಣೆ ಮಾಡಿ ಒಂದು ರೂಪಾಯಿ ಕೊಟ್ಟಿಲ್ಲ, ಆದರೆ ಕಾಂಗ್ರೆಸ್ ಸರ್ಕಾರ 500 ಕೋಟಿ ಹಣ ನೀಡಿದ್ದೇವೆ. ಇದು ಕಾಂಗ್ರೆಸ್ ಬದ್ದತೆ ಆಗಿದೆ. ಕೇಂದ್ರ ಸರ್ಕಾರ ರಾಜ್ಯಕ್ಕೆ ಅನ್ಯಾಯ ಮಾಡುತ್ತಿದೆ. ಜಿಎಸ್ಟಿ ಹಣದ ಪಾಲು ಸರಿಯಾಗಿ ನೀಡುತ್ತಿಲ್ಲ. ನಾಲ್ಕು ವರ್ಷ ಕಾಂಗ್ರೆಸ್ ಸರ್ಕಾರ ಇರುತ್ತದೆ.ನನ್ನನ್ನು ಗೆಲ್ಲಿಸಿದರೆ ಎಲ್ಲಾ ಶಾಸಕರ ಬೆಂಬಲ ಪಡೆಯುವ ಮೂಲಕ ಜಿಲ್ಲೆಯ ಅಭಿವೃದ್ಧಿ ಮಾಡಲಾಗುತ್ತದೆ. ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುವ ಮೂಲಕ ದೇಶದಲ್ಲಿ ಶಾಂತಿ ನೆಲೆಸುವಂತೆ ಮಾಡಬೇಕು ಎಂದು ಕರೆ ನೀಡಿದರು. ಏಪ್ರಿಲ್ 4 ರಂದು ಪ್ರತಿಯೊಬ್ಬ ಕಾರ್ಯಕರ್ತರು ನಾಮಪತ್ರ ಸಲ್ಲಿಸುವ ಮೆರವಣಿಗೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

### ಕಾಲುಬಾಯಿ ರೋಗ ಲಸಿಕಾ ಅಭಿಯಾನ

» ಹೊಸಪೇಟೆ

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 2024–25ನೇ ಸಾಲಿನ ಐದನೇ ಸುತ್ತಿನಾ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಕಾರ್ಯಕ್ರಮವು ಏಪ್ರಿಲ್ 1ರಿಂದ ಅನುಷ್ಠಾನಗೊಳ್ಳಲಿದೆ. ಕಾಲುಬಾಯಿ ರೋಗ ಲಸಿಕಾ ಅಭಿಯಾನ ಕಾರ್ಯಕ್ರಮವನ್ನು ಏ.1ರಿಂದ ಏ.30ರ ವರಗೆ ಹಮ್ಮಿಕೊಳ್ಳಲು ರಾಜ್ಯ ಮಟ್ಟದ ವಿರ್ವಹಣಾ ಸಮಿತಿ ಸಭೆಯಲ್ಲಿ ವೇಳಾಪಟ್ಟಿ ನಿಗದಿಯಾಗಿರುತ್ತದೆ. ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಪಟ್ಟಣ ಪ್ರದೇಶ ಮತ್ತು 45 ಗ್ರಾಮಗಳಲ್ಲಿನ ಜಾನುವಾರುಗಳಿಗೆ ಕಾಲುಬಾಯಿ ಲಸಿಕೆ ಅಭಿಯಾನದಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಪಶುವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯವರು ಕಾಲುಬಾಯಿ ರೋಗ ತಡೆಗಟ್ಟಲು ಜಾನುವಾರುಗಳಿಗೆ ಉಚಿತವಾಗಿ ಲಸಿಕೆ ಹಾಕಲಿದ್ದು, ರೈತ ಬಾಂಧವರು ತಮ್ಮ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕಿಸುವುದು ಕಡ್ಡಾಯ ಮತ್ತು ಪರಿಹಾರ. ರೈತ ಬಾಂಧವರು ಜಾನುವಾರುಗಳಿಗೆ ಲಸಿಕೆ ಹಾಕಿಸಲು ಸಹಕಾರ ನೀಡುವುದರೊಂದಿಗೆ ಲಸಿಕಾ ಕಾರ್ಯಕ್ರಮದಲ್ಲಿ ಗ್ರಾಮಸ್ಥರು ಸಕ್ರಿಯವಾಗಿ ಭಾಗವಹಿಸಿ, ಕಾರ್ಯಕ್ರಮದ ಸದುಪಯೋಗ ಪಡೆದು, ಕಾಲುಬಾಯಿ ರೋಗದಿಂದ ಜಾನುವಾರುಗಳನ್ನು ರಕ್ಷಿಸಿಕೊಳ್ಳಬೇಕು ಎಂದು ವಿಜಯನಗರದ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಭದ್ರಾ ಜಲಾಶಯದಿಂದ ತುಂಗಭದ್ರಾ ನದಿಗೆ ನೀರು

» ಹೊಸಪೇಟೆ

ಜಿಲ್ಲೆಯಲ್ಲಿ ಕುಡಿಯುವ ನೀರಿನ ಅಭಾವವಿರುವುದರಿಂದ ವಿವಿಧ ಕುಡಿಯುವ ಯೋಜನೆಗಳಿಗಾಗಿ ಭದ್ರಾ ಜಲಾಶಯದಿಂದ ತುಂಗಭದ್ರಾ ನದಿಗೆ ನೀರು ಹರಿಸುತ್ತಿದ್ದು, ಅನಧಿಕೃತ ಪಂಪಸೆಟ್‌ಗಳ ಮೂಲಕ ನೀರೆತ್ತುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಭದ್ರಾ ಜಲಾಶಯದಿಂದ ತುಂಗಭದ್ರಾ ನದಿಗೆ ಮಾರ್ಚ್ 29ರ ರಾತ್ರಿಯಿಂದಲೇ ಏಪ್ರಿಲ್ 6ರವರೆಗೆ ಪ್ರತಿದಿನ 3000 ಕ್ಯೂಸೆಕ್ಸ್, ಏ. 6ರಂದು 2200 ಕ್ಯೂಸೆಕ್ಸ್ ಸೇರಿ ಒಟ್ಟು 2 ಟಿ.ಎಂ.ಸಿ ನೀರು ಹರಿಸಲು ಅನುಮತಿ ನೀಡಿ ಆದೇಶವಾಗಿದೆ. ಸಾರ್ವಜನಿಕ ದೂರುಗಳ ಹಿನ್ನೆಲೆಯಲ್ಲಿ ನದಿ ದಂಡೆಯಲ್ಲಿ ಅಳವಡಿಸಿರುವ ಅನಧೀಕೃತ ಪಂಪ್‌ಸೆಟ್‌ಗಳಿಂದ ನೀರೆತ್ತುವುದನ್ನು ನಿಷೇಧಿಸಲಾಗಿದೆ. ಹಾಗೂ ಈ ಅವಧಿಯಲ್ಲಿ ನದಿ ಪಾತ್ರದಲ್ಲಿ ಸಾರ್ವಜನಿಕರು ತಿರುಗಾಡುವುದಾಗಲೀ, ಜನರು ಮತ್ತು ದನಕರುಗಳನ್ನು ನದಿಗೆ ಇಳಿಸುವುದಾಗಲಿ ಹಾಗೂ ನಿರ್ಮಾಣ ಕಾಮಗಾರಿಗಳನ್ನು ನದಿಯಲ್ಲಿ ನಡೆಸುತ್ತಿರುವುದು ಇತ್ಯಾದಿ ಚಟುವಟಿಕೆಗಾಗಿ ನದಿಗೆ ಇಳಿಯದಂತೆ ಸೂಚಿಸಲಾಗಿದೆ. ಇದನ್ನರಿತು ಸಾರ್ವಜನಿಕರು ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಕರ್ನಾಟಕ ನೀರಾವರಿ ನಿಗಮದ ಅಧೀಕ್ಷ ಅಭಿಯಂತರರು ಹಾಗೂ ಭದ್ರ ಜಲಾಶಯ ಯೋಜನೆಯ ಕುಡಿಯುವ ನೀರಿನ ಸಮಿತಿಯ ಸದಸ್ಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಬ್ಬಡಿ ತರಬೇತಿ ಶಿಬಿರ

» ದಾವಣಗೆರೆ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಹಾಗೂ ಸೃಷ್ಠಿ ಕಬಡ್ಡಿ ಅಕಾಡೆಮಿ, ಇವರುಗಳ ಸಂಯುಕ್ತಾಶ್ರಯದಲ್ಲಿ ಏ.05 ರಿಂದ 25 ವರೆಗೆ ಬೆಳಿಗ್ಗ 6.30 ರಿಂದ 8.00 ರ ವರೆಗೆ ಮತ್ತು ಸಾಯಂಕಾಲ 5.30 ರಿಂದ 7.30 ರವರೆಗೆ ಜಿಲ್ಲಾ ಕ್ರೀಡಾಂಗಣ ಆವರಣದಲ್ಲಿ ಬೇಸಿಗೆ ಕಬಡ್ಡಿ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ.

ಮಹಿಳೆ ಅಡುಗೆ ಮಾಡೋಕೆ ಲಾಯಕ್ಕು ಹೇಳಿಕೆಗೆ ಗಾಯತ್ರಿ ಸಿದ್ದೇಶ್ವರ್ ತಿರುಗೇಟು

# ಚುನಾವಣಾ ಫಲಿತಾಂಶ ಉತ್ತರವಾಗಬೇಕು

» ದಾವಣಗೆರೆ

ಮಾತಾಡೋಕೆ ಬರಲ್ಲ, ಅವರು ಅಡುಗೆ ಮಾಡೋಕೆ ಲಾಯಕ್ಕು ಎಂಬ ಶಾಮನೂರು ಶಿವಶಂಕರಪ್ಪ ಹೇಳಿಕೆಗೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ್ ಖಡಕ್ ತಿರುಗೇಟು ಕೊಟ್ಟಿದ್ದಾರೆ.

ದಾವಣಗೆರೆ ನಗರದ ಜಿಲ್ಲಾ ಕ್ರೀಡಾಂಗಣ, ವಿದ್ಯಾನಗರ ಉದ್ಯಾನವನ ಹಾಗೂ ನಗರದ ಹಲವು ಮುಖಂಡರ ಮನೆಗಳಿಗೆ ಖುದ್ದು ಭೇಟಿ ನೀಡಿ ಮತಯಾಚಿಸಿ ಮಾತನಾಡಿದ ಅವರು, ಶಾಮನೂರು ಶಿವಶಂಕರಪ್ಪ ಅವರ ಹೇಳಿಕೆಗೆ ಸರಿಯಾದ ಉತ್ತರ ಕೊಡಬೇಕು ಅಂದರೆ ಸಾರ್ವಜನಿಕರು ನನ್ನನ್ನು ಗೆಲ್ಲಿಸುವ ಮೂಲಕ ಅಡುಗೆ ಮಾಡುವುದು ಮಾತ್ರವಲ್ಲ. ಸಂಸತ್ತಿನಲ್ಲಿ ಕೂತು ಅಧಿಕಾರವನ್ನು ಮಾಡ್ತಾರೆ, ಅಭಿವೃದ್ದಿಯನ್ನೂ ಮಾಡ್ತಾರೆ ಅನ್ನೋದನ್ನು ಸಾಬೀತುಪಡಿಸಬೇಕು. ದಾವಣಗೆರೆ ಬಿಜೆಪಿಯ ಚುನಾವಣಾ ಫಲಿತಾಂಶ ಅವರಿಗೆ ಉತ್ತರವಾಗಬೇಕು ಎಂದರು.ನಾವು ಯಾರನ್ನೂ ಕೀಳಾಗಿ




ನೋಡಬಾರದು, ಎಲ್ಲರಲ್ಲೂ ಅವರದ್ದೇ ಆದ ಶಕ್ತಿ, ಸಾಮರ್ಥ್ಯ ಇರುತ್ತದೆ. ಒನಕೆ ಓಬವ್ವ, ಕಿತ್ತೂರು ರಾಣಿ ಚನ್ನಮ್ಮ, ಝಾನ್ಸಿ ರಾಣಿ ಲಕ್ಷ್ಮಿಬಾಯಿ, ಸಾವಿತ್ರಿ ಬಾಯಿ ಫುಲೆ ಸೇರಿದಂತೆ ಅನೇಕ ಮಹಿಳೆಯರು ಇಂದಿಗೂ ಅವರ ಸಾಧನೆಯಿಂದ ಜೀವಂತವಾಗಿದ್ದಾರೆ. ಸಣ್ಣ ಮಕ್ಕಳಿಗೆ ಅವರ ಬಗ್ಗೆ ಕತೆಗಳನ್ನು ಹೇಳುತ್ತೇವೆ. ಅವರೆಲ್ಲ ಅಡುಗೆ ಮಾಡುವುದಕ್ಕೆ ಮಾತ್ರ ಲಾಯಕ್ಕಾಗಿದ್ದರೆ ಇತಿಹಾಸ ಪುಟಗಳಲ್ಲಿ ಅವರ್ಯಾರು ಇರುತ್ತಿರಲಿಲ್ಲ ಎಂದರು.

ಜಿಲ್ಲಾ ಕ್ರೀಡಾಂಗಣದಲ್ಲಿ ಯುವಕ–ಯುವತಿಯರ ಜೊತೆ ಕ್ರಿಕೆಟ್ ಆಟವಾಡಿ, ಬೌಲಿಂಗ್ ಮಾಡಿದ ಗಾಯಿತ್ರಿ ಸಿದ್ದೇಶ್ವರ್ ಅವರು ಪ್ರಧಾನಿ ನರೇಂದ್ರ ನೇತೃತ್ವದ ಕೇಂದ್ರ ಸರ್ಕಾರದ ಸಾಧನೆಗಳನ್ನು ವಿವರಿಸಿದರು. ವಿದ್ಯಾನಗರದಲ್ಲಿ ವಾಯು ವಿಹಾರಿಗಳ ಜೊತೆ ವಾಕ್ ಮಾಡಿ ಸಮಾಲೋಚನೆ ನಡೆಸಿದರು.

ಮಾಜಿ ಶಾಸಕ ಟಿ.ಗುರುಸಿದ್ದನಗೌಡ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿ, ಚುನಾವಣೆ ಕಾರ್ಯತಂತ್ರದ ಬಗ್ಗೆ ಚರ್ಚಿಸಿದರು. ನಗರದ ಉದ್ಯಮಿ ರಮೇಶ್, ಮಂಜುನಾಥ ಕಾಲೇಜಿನ ಕಾರ್ಯದರ್ಶಿ ದ್ಯಾಮಣ್ಣನವರ್, ಪಾಲಿಕೆ ಸದಸ್ಯೆ ಗೀತಾ ಬಿ. ದಿಳ್ಯಪ್ಪ, ಲೋಕಿಕೆರೆ ಕೆಂಚಪ್ಪ, ಕುಮಾರ್ ಜುವೆಲರ್ಸ್ ಮಾಲೀಕರಾದ ಸಿ.ಕೆ.ಸಿದ್ದಪ್ಪ, ಶ್ಯಾಗಲೆ ಮಹಾದೇವಪ್ಪ, ಕಸಾಪ ಮಾಜಿ ಅಧ್ಯಕ್ಷರಾದ ಕುರ್ಕಿ ಮಂಜುನಾಥ್, ಮಹೇಶ್, ಡಾ.ಗಾಯಿತ್ರಿ, ಆಂಜನೇಯ ಬಡಾವಣೆ ಬೂತ್ ಅಧ್ಯಕ್ಷ ಅರುಣ್, ಛಾಯಾ ಶ್ರೀಧರ್, ವಿಜಯ್ ಕುಮಾರ್ ಸೇರಿದಂತೆ ಹತ್ತಾರು ಬೂತ್ ಅಧ್ಯಕ್ಷರು, ಕಾರ್ಯಕರ್ತರು, ಅಭಿಮಾನಿಗಳ ನಿವಾಸಕ್ಕೆ ಭೇಟಿ ನಿಡಿ ಚರ್ಚೆ ನಡೆಸಿ ಮತಯಾಚನೆ ಮಾಡಿದರು.

ಮಾಜಿ ಶಾಸಕ ಬಸವರಾಜ್ ನಾಯ್ಕ್ , ರೈತ ಮೋರ್ಚಾ ರಾಜ ಉಪಾಧ್ಯಕ್ಷ ಲೋಕಿಕೆರೆ ನಾಗರಾಜ್, ಬಿಜೆಪಿ ಜಿಲ್ಲಾಧ್ಯಕ್ಷ ಎನ್.ರಾಜಶೇಖರ್, ಜಿ.ಎಸ್. ಅನಿತ್ ಕುಮಾರ್, ಬಿ.ಎಸ್.ಜಗದೀಶ್, ಲಕ್ಷ್ಮಣ್, ಪಾಲಿಕೆ ಸದಸ್ಯರಾದ ಗೀತ ದಿಳ್ಯಪ್ಪ, ವೀಣಾ ನಂಜಪ್ಪ, ಶಿವಕುಮಾರ್, ಪ್ರೇಮಮ್ಮ ನನ್ನಯ್ಯ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಇದ್ದರು.



ಪರಶುರಾಂಪುರ.ಹೋಬಳಿ ಸಿದ್ದೇಶ್ವರನ ದುರ್ಗ,ಪಿ.ಮಹದೇವಪುರ,ದೋಡ್ಡಚೆಲ್ಲೂರು,ಟಿ.ಎನ್ ಕೋಟೆ ಗ್ರಾಮಗಳಿಗೆ ಶಾಸಕ ಹಾಗೂ ಸಣ್ಣ ಕೈಗಾರಿಗಳ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಭೇಟಿ ನೀಡಿ ಸಮಸ್ಯೆಗಳನ್ನ ಆಲಿಸಿದರು. ಕಳೆದ ದಿನದಿಂದ ಮೊದುರೂ ಗ್ರಾಮದ ಆಂಜನೇಯಸ್ವಾಮಿ ದೇವಸ್ಥಾನಕ್ಕೆ ಪೂಜೆ ಸಲ್ಲಿಸಿ ಅಲ್ಲಿಂದ ಜಾಜೂರು,ಪಗಡಲಬಂಡೆ,ಚನ್ನಮ್ಮನಾಗತಿಹಳ್ಳಿ ಸೇರಿದಂತೆ ನಾನ ಗ್ರಾಮಗಳಿಗೆ ಭೇಟಿ ನೀಡಿ ಸಮಸ್ಯೆಗಳನ್ನ ಆಲಿಸಿದರು. ಈ ವೇಳೆಯಲ್ಲಿ ಮುಖಂಡರು ಹಾಗೂ ಗ್ರಾಮಸ್ಥರನ್ನ ಭೇಟಿ ಮಾಡಿ ಕುಡಿಯುವ ನೀರಿನ ಜತೆ ಇನ್ನಿತರೆ ಸಮಸ್ಯೆಗಳೇನಿದ್ದರೇ ಕೂಡಲೇ ನನ್ನ ಗಮನಕ್ಕೆ ತನ್ನಿ ಎಂದರು. ಇದೇ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಪ್ರಕಾಶ್ ಮೂರ್ತಿ,ತಾಪಂ ಮಾಜಿ ಸದಸ್ಯ ಗದ್ದಿಗೆ ತಿಪ್ಪೇಸ್ವಾಮಿ, ಪಿಆರ್ ಪುರ ಬ್ಲಾಕ್ ಅಧ್ಯಕ್ಷ ಶಶಿಧರ,ನಗರಸಭಾ ಸದಸ್ಯರಾದ ರಮೇಶ್ ಗೌಡ,ರಾಘವೇಂದ್ರ,ಮುಖಂಡರಾದ ಚನ್ನಕೇಶವ, ಅರವಿಂದ,ತ್ಯಾಗರಾಜು,ಚೌಳೂರು ಬಸವರಾಜು,ಹನಮಂತರಾಯ,ಸೋಮಶೇಖರ್,ರೆಡ್ಡಿಹಳ್ಳಿ ಶಿವಣ್ಣ,ಸ್ಥಳೀಯ ಗ್ರಾಪಂ ಅಧ್ಯಕ್ಷರು,ಉಪಾಧ್ಯಕ್ಷರು,ಸದಸ್ಯರು,ಮುಖಂಡರು,ಗ್ರಾಮಸ್ಥರಿದ್ದರು.

## ಬಿಎಸ್‌ವೈಗೆ ಬಗ್ಗೆ ಹೇಳಿಕೆ ಬೇಷರತ್‌ಕ್ಷಮೆಯಾಚಿಸಿ



» ಚಿತ್ರದುರ್ಗ

ಚಂದ್ರಪ್ಪ ಏನಾದರೂ ಶಾಸಕರಾಗಿದ್ದರೆ ಅದು ಯಡಿಯೂರಪ್ಪ ಹಾಗೂ ಅವರ ಕುಟುಂಬದ ಕೃಪಾಶೀರ್ವಾದದಿಂದ ಅದನ್ನು ಅವರು ಮನಗಾಣಬೇಕೆಂದು ಹೊಳಲ್ಕೆರೆಯ ಅಗ್ರಹಾರದ ಮಂಜುನಾಥ್ ಹೇಳಿದರು.

ಚಿತ್ರದುರ್ಗದಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತಾಡಿದರು. ಅದು ಬಿಟ್ಟು ಲಿಂಗಾಯಿತ ಸಮುದಾಯದ ಬಗ್ಗೆ ಹಾಗೂ ಯಡಿಯೂರಪ್ಪ ಅವರ ಬಗ್ಗೆ ಕೀಳಾಗಿ ಮಾತಾಡುವುದು ಸರಿಯಲ್ಲ. ಕೂಡಲೇ ಕ್ಷಮೆ ಕೇಳಬೇಕು. ಇನ್ನು ಗೋವಿಂದ ಕಾರಜೋಳ ಅವರು ನಿರಾತಂಕವಾಗಿ ಚುನಾವಣೆಯನ್ನು ಮಾಡಬಹುದು ನಾವು ಹೆಚ್ಚಿನ ಮತಗಳನ್ನು ಹಾಕಿಸುತ್ತೇವೆ ಎಂದರು. ಹೊಳಲ್ಕೆರೆ ಶಾಸಕ ಚಂದ್ರಪ್ಪ ತಮ್ಮ ಚುನಾವಣೆಯನ್ನು ಮಾಡಿದ್ದಾರೆಯೇ ಹೊರೆತು ಬೇರೆ ಯಾವ ಚುನಾವಣೆಯನ್ನು ಮಾಡಿಲ್ಲ. ಇಂದು ಕೂಡ ತಮಗೆ ಬೇಕಿರುವ ಕೆಲವು ಜನರನ್ನು ಇಟ್ಟುಕೊಂಡು ಸಭೆ ಮಾಡಿದ್ದಾರೆ. ಅವರಿಗೆ ತಾಕತ್ ಇದ್ದರೆ ಅವರಿಗೆ ಗಂಡಸುತನ ಇದ್ದರೆ ಅವರು ಒಂದು ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಪಕ್ಷೇತರರಾಗಿ ಗೆದ್ದು ಬರಲಿ, ಎಂಎಲ್‌ಎ ನಿಗಮ ಮಂಡಳಿ ಸ್ಥಾನ ನಮಗೆ ಬೇಕು ಎಂದು ಹೇಳುತ್ತಾರೆ.

ಹೊಳಲ್ಕೆರೆ ಪಟ್ಟಣ ಪಂಚಾಯಿತಿ ಸದಸ್ಯ ಜಯಸಿಂಹ ಕಾಟ್ರೋತ್ ಮಾತನಾಡಿ ಕುಟುಂಬಕ್ಕಾಗಿ ರಾಜಕಾರಣ ಮಾಡುತ್ತಿದ್ದಾರೆಯೇ ಹೊರೆತು ಸಂಘ ಸಂಸ್ಥೆ ಪಕ್ಷಗಳಿಗಾಗಿ ಚುನಾವಣೆ ಮಾಡಿಲ್ಲ ಇಂತಹ ವ್ಯಕ್ತಿ ಬಿಜೆಪಿ ಯಡಿಯೂರಪ್ಪ ಅವರ ಬಗ್ಗೆ ಮಾತಾಡುತ್ತಾರೆ. ಪಟ್ಟಣ ಪಂಚಾಯಿತಿ ಚುನಾವಣೆಯಲ್ಲಿ 10 ಸದದಸ್ಯರನ್ನು ಗೆಲ್ಲಿಸಿಕೊಳ್ಳುವ ಗಂಡಸುತನ ವಿರಲಿಲ್ಲವೇ? ಸದಾನಂದಗೌಡರು ಸಿಎಂ ಈಶ್ವರಪ್ಪ ಅವರಿಗೆ ಟಿಕೇಟ್ ಕೊಟ್ಟಿಲ್ಲ. ಅವರಿಗಿಂತ ಇವರು ದೊಡ್ಡವರಾ? ಪಕ್ಷ ಯಾರಿಗೆ ಟಿಕೇಟ್ ಕೊಟ್ಟಿದಿಯೋ ಅವರ ಪರ ಕೆಲಸ ಮಾಡುತ್ತಿದ್ದಾರೆ. ಇವರಿಗೆ ಪಾರ್ಟಿವಿಥ್ ಎ ಡಿಫರೆನ್ಸ್ ಗೊತ್ತಿಲ್ಲ.ಇದರಿಂದ ಈ ರೀತಿ ಮಾತಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಬಿಜೆಪಿಯ ನಿಷ್ಠಾವಂತರ ಶಾಪ ತಟ್ಟುತ್ತದೆ. ಕೂಡಲೇ ಚಂದ್ರಪ್ಪ ಬೇಷರತ್ ಕ್ಷಮೆ ಯಾಚಿಸಿ ಬಿಜೆಪಿ ಪರವಾಗಿ ಕೆಲಸ ಮಾಡಿದರೆ ಗೌರವ ಬರುತ್ತದೆ ಎಂದರು. ಗೋಷ್ಠಿಯಲ್ಲಿ ಅಗ್ರಹಾರ ಬಸವರಾಜ್ ತಿಪ್ಪೇಸ್ವಾಮಿ ಇದ್ದರು.

## ಸರ್ಕಾರಿ ಪದವಿಪೂರ್ವ ಕಾಲೇಜು ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿಗೆ ಜ್ಞಾನಯೋಗಿ ಶಿವರಣೆ ನೀಲಾಂಬಿಕ ಪ್ರಶಸ್ತಿ

» ಚಳ್ಳಕೆರೆ

ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನ ರಾಸಾಯಶಾಸ್ತ್ರ ಉಪನ್ಯಾಸಕಿ, ರಾಷ್ಟ್ರೀಯ ಸೇವಾ ಯೋಜನಾಧಿಕಾರಿ, ರಾಜ್ಯಪ್ರಶಸ್ತಿ ವಿಜೇತೆ ಬಿ.ಶಾಂತಕುಮಾರಿಯವರಿಗೆ ವಿಶ್ವಕನ್ನಡ ಕಲಾಸಂಘ ಬೆಂಗಳೂರು ಜ್ಞಾನ ಯೋಗಿ ಶಿವಶರಣೆ ನೀಲಾಂಬಿಕೆ ಪ್ರಶಸ್ತಿ ನೀಡಿ ಗೌರವಿಸಿದೆ.

ಬೆಂಗಳೂರಿನ ಬಾಗಲಗುಂಟೆಯ ಮಹಾಲಕ್ಷ್ಮಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಮಹಿಳಾ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಕಮಲರಾಜೇಶ್ ಪ್ರಶಸ್ತಿ ನೀಡಿ ಗೌರವಿಸಿದರು. ಮಹಿಳೆಯರ ಸಾಧನೆಯ ಬಗ್ಗೆ ಎಲ್ಲರೂ ಹೆಮ್ಮೆ ಪಡಬೇಕಿದೆ. ಇತ್ತೀಚಿನ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು



ದಾಪುಗಾಲಿಡುತ್ತಿದ್ದಾರೆ. ಸಾಧನೆಯಿಂದ ತಮ್ಮ ಸಾಮರ್ಥ್ಯವನ್ನು ರೂಪಿಸಿದ್ದಾರೆ. ವಿಶೇಷವಾಗಿ ಬಿ.ಶಾಂತಕುಮಾರಿಯವರು ರಾಷ್ಟ್ರೀಯ ಸೇವಾ ಯೋಜನಾ ಘಟಕದಲ್ಲಿ ರಾಜ್ಯಮಟ್ಟದ ಪ್ರಶಸ್ತಿ ಪಡೆದಿದ್ದಾರೆ. ಇಂತಹವರನ್ನು ಅಭಿನಂದಿಸುತ್ತಿರುವುದಕ್ಕೆ ನಾವೆಲ್ಲರೂ ಸಂತೋಷ ಪಡೆಬೇಕು ಎಂದರು.

## ಪ್ರಮುಖ ಸುದ್ದಿ

# ಅಪಪ್ರಚಾರ ಮೊದಲು ನಿಲ್ಲಿಸಿ: ನವೀನ್ ಎಚ್ಚರಿಕೆ

» ಮೊದಲ ಪುಟದಿಂದ

ಎಂ ಚಂದ್ರಪ್ಪ ರವರು ನಮ್ಮ ಪಕ್ಷದ ಹಿರಿಯ ನಾಯಕರು.. ಅವರ ಬಗ್ಗೆ ವಿಶೇಷ ಗೌರವವಿದೆ... ಆದರೆ ಬಿಜೆಪಿಗೂ ಹಾಗೂ ಅವರಿಗೆ ಯಾವುದೇ ಸಂಬಂಧ ಇಲ್ಲದ ಕೆಲವು ನಾಯಕರುಗಳು ಚಂದ್ರಪ್ಪ ರವರನ್ನು ಎತ್ತಿಕಟ್ಟುವ ಕೆಲಸ ಮಾಡುತ್ತಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಗೋವಿಂದ ಕಾರಜೋಳ್ ರವರು ಮೊದಲ ಬಾರಿಗೆ ನಗರಕ್ಕೆ ಆಗಮಿಸುವ ಸಂದರ್ಭದಲ್ಲಿ ಮಸಿ ಎರೆಚುವ, ಮೊಟ್ಟೆ ಹೊಡೆಯುವ, ಕಪ್ಪು ಬಟ್ಟೆ ಪ್ರದರ್ಶನ ಮಾಡುವ ಪ್ರಯತ್ನ ಮಾಡಿದ್ದೀರಿ ಐದು ಬಾರಿ ಶಾಸಕರಾದ ಉಪ ಮುಖ್ಯಮಂತ್ರಿಯಾಗಿದಂತಹ ಕಾರಜೋಳ್ ರವರಿಗೆ ಮಸಿ ಬಳಿಯಲು ಮೊಟ್ಟೆ ಎಸೆಯಲು ಸಿದ್ಧತೆ ಮಾಡಿಕೊಂಡಿರುವುದು ಎಷ್ಟರಮಟ್ಟಿಗೆ ಸರಿ... ಈ ರೀತಿ ಹೆದರಿಸುವ ಕೆಲಸವನ್ನು ಬಿಜೆಪಿ ಪಕ್ಷ ಯಶಸ್ವಿಯಾಗಿ ಹೆದರಿಸುತ್ತದೆ.. ಈ ರೀತಿ ಹೆದರಿಸುವ ಕೆಲಸವನ್ನು ಕೈಬಿಡಬೇಕು ಎಂದು ಸೂಚಿಸಿದರು.

ಯಡಿಯೂರಪ್ಪನವರು ನಮಗೆ ಮೋಸ ಮಾಡಿದರು ಅವರು ಬ್ಲಾಕ್ ಮೇಲ್ ಮಾಡಿದರು ಎಂದು ಆರೋಪಿಸಿದ್ದೀರಿ.. ಬ್ಲಾಕ್ ಮೇಲ್ ಮೂಲಕ ಹೆದರಿಸುವ ಅವಶ್ಯಕತೆ ಯಡಿಯೂರಪ್ಪನವರಿಗೆ ಇಲ್ಲ... ನೀವೇನು ಹೊಳ್ಕೆರೆಯಲ್ಲಿ ಗೆದ್ದಿದ್ದೀರಿ ಅದು ಯಡಿಯೂರಪ್ಪನವರ ಆಶೀರ್ವಾದದಿಂದ.ಕಳ್ಳಿ ನರಸಪ್ಪ ಎನ್ನುವ ಪದವನ್ನು ಬಳಸಿದ್ದೀರಿ... ಕಳ್ಳಿ ನರಸಪ್ಪ ಅಂದರೆ ಏನು ಎಂಬುದನ್ನು ಅವರು ತಿಳಿಸಬೇಕು. ಇದು ಚಂದ್ರಪ್ಪ ರವರ ದೃತರಾಷ್ಟ್ರ ಪ್ರೇಮ ಹೊರತು... ಭೋವಿ ಸಮುದಾಯದವರನ್ನು ಬೆಳೆಸುವ ಕೆಲಸ ಮಾಡಲಿಲ್ಲ... ನಿಮ್ಮ ಸಮುದಾಯಕ್ಕೆ ಅನ್ಯಾಯ ಆಗಿದ್ದರೆ ನಿಮ್ಮ ಮಗನಿಂದ ಧ್ವನಿ ಎತ್ತಬೇಡಿ. ಇವತ್ತಿಂದ ಯಾರಾದರೂ ಗೋ ಬ್ಯಾಕ್ ಎಂದು ಘೋಷಣೆ ಕೂಗಿದರೆ ಅಂತವರ ವಿರುದ್ಧ ಪಕ್ಷ ಶಿಸ್ತಿನ ಕ್ರಮ ಕೈಗೊಳ್ಳಲಿದೆ. ಏಪ್ರಿಲ್ 12ರಂದು ಹೊಳಲ್ಕೆರೆಯಲ್ಲಿ ರಾಜ್ಯಾಧ್ಯಕ್ಷರ ನೇತೃತ್ವದಲ್ಲಿ 50,000 ಜನ ಸೇರಿಸಿ ಬೃಹತ್ ಸಮಾವೇಶ ಮಾಡುತ್ತೇವೆ.ಏಪ್ರಿಲ್–04 ರಂದು ನಮ್ಮ ಅಭ್ಯರ್ಥಿಯಾದ ಗೋವಿಂದ ಕಾರಜೋಳರವರು ನಾಮಪತ್ರ ಸಲ್ಲಿಕೆ ಮಾಡಲಿದ್ದಾರೆ...

ಶಾಸಕ ಎಂ.ಚಂದ್ರಪ್ಪ ತಮ್ಮ ಪುತ್ರನಿಗೆ ಟಿಕೇಟ್ ಸಿಗಲಿಲ್ಲ ಎನ್ನುವ ಕಾರಣಕ್ಕೆ ಭೋವಿ ಸಮುದಾಯಕ್ಕೆ ಅನ್ಯಾಯ ಮಾಡಲಾಗುತ್ತಿದೆ ಎನ್ನುವುದನ್ನು ನಿಲ್ಲಿಸಬೇಕು. ಚಂದ್ರಪ್ಪರವರು ಎಷ್ಟು ಜನ ಭೋವಿ ನಾಯಕರನ್ನು ಬೆಳೆಸಿದ್ದಾರೆ. ಎಷ್ಟು ಜನರನ್ನು ಜಿಲ್ಲಾ ಪಂಚಾಯಿತಿ, ನಿಗಮ ಮಂಡಳಿಗಳಿಗೆ ತಂದಿದ್ದಾರೆ ಎಂದು ಪ್ರಶ್ನಿಸಿದರು.

ಚಿತ್ರದುರ್ಗ ಲೋಕಸಭೆ ಎಸ್ಸಿ ಮೀಸಲು ಕ್ಷೇತ್ರವಾದ ತಕ್ಷಣ ಭೋವಿ ಸಮುದಾಯದ ಜನಾರ್ಧನಸ್ವಾಮಿ ಅವರಿಗೆ ಟಿಕೇಟ್ ಕೊಡಲಾಗಿತ್ತು. ಹೊಳಲ್ಕೆರೆ ಮೀಸಲು ಕ್ಷೇತ್ರವಾದ ವರ್ಷದಿಂದ ಈವರೆಗೆ ಬಿಜೆಪಿ ಭೋವಿ ಸಮುದಾಯದ ಚಂದ್ರಪ್ಪ ಅವರಿಗೆ ಟಿಕೇಟ್ ನೀಡುತ್ತಿದೆ. ಹೊಸದುರ್ಗ ಸಾಮಾನ್ಯ ಕ್ಷೇತ್ರದಲ್ಲಿ ಗೂಳಿಹಟ್ಟಿ ಶೇಖರ್ ಅವರಿಗೆ ಟಿಕೇಟ್ ಕೊಟ್ಟಿದೆ. ಗೂಳಿಹಟ್ಟಿಗೆ ಟಿಕೇಟ್ ಕೈ ತಪ್ಪಿದಾಗ ಚಂದ್ರಪ್ಪ ಯಾಕೆ ಪ್ರಶ್ನೆ ಮಾಡಲಿಲ್ಲ ಎಂದು ನವೀನ್ ಕೇಳಿದರು.

ಹೊಳಲ್ಕೆರೆಯಲ್ಲಿ ಅತೀ ಹೆಚ್ಚು ಲಿಂಗಾಯತ ಮತದಾರರಿದ್ದಾರೆ. ಇವರ ನಡವಳಿಕೆಯಿಂದ ಅಲ್ಲಿ ಬೇಸರವಾಗಿದ್ದಾರೆ. ಚಂದ್ರಪ್ಪ ಅವರನ್ನು ಬೆಳೆಸಿದ ಬಿ.ಟಿ.ಚನ್ನಬಸಪ್ಪ ಹಾಗೂ ಬಿ.ಎಸ್. ಯಡಿಯೂರಪ್ಪ ಅವರ ಪೋಟೊವನ್ನು ಮನೆಯಲ್ಲಿ ಹಾಕಿಕೊಳ್ಳಬೇಕು ಜನರ ಮುಂದೆ ಯಡಿಯೂರಪ್ಪ ಕುತ್ತಿಗೆ ಕೊಯ್ದರು ಎಂದು ಹೇಳಿ, ಮಾಧ್ಯಮಗಳ ಮುಂದೆ ತಂದೆ ಸಮಾನ ಎನ್ನುತ್ತಾರೆ. ಈ ಎಲ್ಲಾ ಬೆಳವಣಿಗೆಗಳಿಂದ ಹೊಳಲ್ಕೆರೆ ಕ್ಷೇತ್ರದ ಜನ ನೋವಿನಲ್ಲಿದ್ದಾರೆ. ಈಗಲೂ ಚಂದ್ರಪ್ಪ ಅವರ ಕೈಯಲ್ಲೇ ನಿರ್ಧಾರ ಇದೆ. ತಮ್ಮ ಪಟ್ಟು ಸಡಿಲಿಸಿ ಪಕ್ಷದ ಅಭ್ಯರ್ಥಿ ಗೆಲ್ಲಿಸಿ ತಮ್ಮ ವರ್ಚಸ್ಸನ್ನು ಹೆಚ್ಚಿಸಿಕೊಳ್ಳಲಿ ಎಂದು ತಿಳಿಸಿ ರಘುಚಂದನ್ ಇನ್ನೂ ಬೆಳೆಯುವ ಯುವ ನಾಯಕ. ಪಕ್ಷದಲ್ಲಿ ಮುಂದೆ ಭವಿಷ್ಯವಿದೆ. ಹಾಗಾಗಿ ತಮ್ಮ ನಿರ್ಧಾರ ಬದಲಾವಣೆ ಮಾಡಿಕೊಳ್ಳಲಿ ಎಂದು ಹೇಳಿದರು.

ಸಾಮಾಜಿಕನ್ಯಾಯದಡಿ ಚಿತ್ರದುರ್ಗದಲ್ಲಿ ಎಸ್ಸಿ ಎಡಗೈ ಸಮುದಾಯಕ್ಕೆ ಟಿಕೇಟ್ ಕೊಡಲಾಗಿದೆಯೇ ಹೊರತು, ಶಾಸಕ ಎಂ.ಚಂದ್ರಪ್ಪ ಪುತ್ರ ರಘುಚಂದನ್ ಅವರಿಗೆ ತಪ್ಪಿಸುವ ಉದ್ದೇಶದಿಂದಲ್ಲ ರಾಜ್ಯದ 5 ಎಸ್ಸಿ ಮೀಸಲು ಕ್ಷೇತ್ರಗಳ ಪೈಕಿ ಬಿಜೆಪಿ ಸೋಷಿಯಲ್ ಇಂಜಿನಿಯರಿಂಗ್ ಮಾಡಿ, ನಮ್ಮ ಮಿತ್ರ ಪಕ್ಷ ಜೆಡಿಎಸ್ ಕೋಲಾರದಲ್ಲಿ ಭೋವಿ ಸಮುದಾಯಕ್ಕೆ ಟಿಕೇಟ್ ಫೈನಲ್ ಮಾಡಿದ ಹಿನ್ನೆಲೆಯಲ್ಲಿ ಚಿತ್ರದುರ್ಗದಲ್ಲಿ ಕಾರಜೋಳ ಅವರಿಗೆ ಘೋಷಣೆ ಮಾಡಲಾಗಿದೆ ಎಂದು ಹೇಳಿದರು.

ಹೊಳಲ್ಕೆರೆಯಲ್ಲೂ ಶನಿವಾರ ಬೆಂಬಲಿಗರುಸೇರಿಪ್ರತಿಭಟನೆಮಾಡಿದ್ದಾರೆ. ಹೀಗೆ ಬಿಜೆಪಿಯನ್ನು ಹೆದರಿಸುವ ಪ್ರಯತ್ನ ಮಾಡಿದರೆ ನಡೆಯುವುದಿಲ್ಲ. ಬಿಜೆಪಿ ಇಂತಹ ನೂರಾರು ಚುನಾವಣೆ, ಸಾವಿರಾರು ಟಿಕೇಟ್ ಕೊಟ್ಟಿದೆ. ಇಂದಿನಿಂದ ಯಾರಾದರೂ ಗೋ ಬ್ಯಾಕ್ ಎಂದರೆ ತಕ್ಕ ಶಾಸ್ತಿ ಮಾಡಲು ಬಿಜೆಪಿ ಸಿದ್ಧವಾಗಿದೆ. ಬಿಜೆಪಿ ಕಾರ್ಯಕರ್ತರು ಆ ವೇದಿಕೆಗಳಲ್ಲಿ ಕಾಣಿಸಿಕೊಂಡರೆ ಶಿಸ್ತು ಕ್ರಮ ತೆಗೆದುಕೊಳ್ಳುವುದಾಗಿ ಎಚ್ಚರಿಕೆ ನೀಡಿ ಏ.2 ರಂದು ರಾಜ್ಯಕ್ಕೆ ಕೇಂದ್ರ ನಾಯಕ ಅಮಿತ್ ಶಾ ಆಗಮಿಸಲಿದ್ದು, ಅಲ್ಲಿ ಚಿತ್ರದುರ್ಗದ ಸಮಸ್ಯೆಯೂ ಚರ್ಚೆಗೆ ಬರಲಿದೆ ಎಂದು ಹೇಳಿದರು.ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಎ.ಮುರುಳಿ, ಮುಖಂಡರಾದ ಜಿ.ಟಿ.ಸುರೇಶ್, ಸಂಪತ್, ಎಸ್.ಆರ್. ಗಿರೀಶ್, ಛಲವಾದಿ ತಿಪ್ಪೇಸ್ವಾಮಿ, ನವೀನ್ ಇತರರಿದ್ದರು.

ಫಾಸ್ಟ್ ನ್ಯೂಸ್

## ಲೋಕಸಭಾ ಚುನಾವಣೆ, ಮತದಾನ ಜಾಗೃತಿಗೆ ಬೈಕ್ ರಾಲಿ



» ದಾವಣಗೆರೆ

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಸ್ವೀಪ್ ಸಮಿತಿಯಿಂದ ಜಿಲ್ಲಾ ಪಂಚಾಯತ್ ಕಚೇರಿ ಬಳಿಯಿಂದ ಭಾನುವಾರ ಆಯೋಜಿಸಿದ್ದ ಮತದಾರರ ಜಾಗೃತಿ ಮೂಡಿಸುವ ಬೈಕ್ ರ್ಯಾಲಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ ಇಟ್ನಾಳ್ ಚಾಲನೆ ನೀಡಿದರು. ಜಾಥಾವು ಜಿಲ್ಲಾ ಪಂಚಾಯ□□ನಿಂದ ಹೊರಟು, ಜಯದೇವ ಸರ್ಕಲ್, ಪಿ.ಬಿ.ರಸ್ತೆಯ ಮೂಲಕ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಅರುಣ ಸರ್ಕ□□ನಲ್ಲಿ ಮುಕ್ತಾಯಗೊಂಡು ಮತದಾನ ಜಾಗೃತಿ ಮೂಡಿಸಲಾಯಿತು. ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ, ಬಿಸಿಎಂ ಅಧಿಕಾರಿ ಗಾಯತ್ರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

## ಏಪ್ರಿಲ್ 01ರಂದು ಕೆಯುಡಬ್ಲ್ಯೂಜೆ ದತ್ತಿನಿಧಿ ಪ್ರಶಸ್ತಿ ಪ್ರಧಾನ ಸಮಾರಂಭ

» ಚಿತ್ರದುರ್ಗ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಏಪ್ರಿಲ್ 01ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಪಿಳ್ಳೆಕೇರನಹಳ್ಳಿಯ ಸಮೀಪದ ಎ□□ಆ□□ಎಸ್ ಕಾಲೇಜ್ ಆವರಣದ ಡಾ.ಬಿ.ವಿ.ವೈಕುಂಠರಾಜು ವೇದಿಕೆಯಲ್ಲಿ "ಕೆಯುಡಬ್ಲ್ಯೂಜೆ ದತ್ತಿನಿಧಿ ಪ್ರಶಸ್ತಿ ಪ್ರಧಾನ ಸಮಾರಂಭ" ಹಮ್ಮಿಕೊಳ್ಳಲಾಗಿದೆ.ಖ್ಯಾತ ಪತ್ರಕರ್ತರು ಹಾಗೂ ಮ್ಯಾಗ್ಸೆಸೆ ಪ್ರಶಸ್ತಿ ಪುರಸ್ಕೃತ ಪಿ.ಸಾಯಿನಾಥ್ ಅವರು ಸಮಾರಂಭ ಉದ್ಘಾಟನೆ ನೆರವೇರಿಸಿ, ಪ್ರಶಸ್ತಿ ಪ್ರಧಾನ ಮಾಡುವರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸುವರು. ಚಿತ್ರದುರ್ಗ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಗೌಡಗೆರೆ ಮೊದಲ ಮಾತುಗಳನ್ನಾಡುವರು. ಕೊಪ್ಪಳ ವಿಶ್ವವಿದ್ಯಾಲಯ ಕುಲಪತಿ ಪ್ರೊ.ಬಿ.ಕೆ.ರವಿ ದಿಕ್ಸೂಚಿ ಭಾಷಣ ಮಾಡುವರು.ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ಎ□□ಆ□□ಎಸ್ ಸಮೂಹ ಶಿಕ್ಷಣ ಸಂಸ್ಥೆ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಎ□□ಜೆಎಂ ವಿದ್ಯಾಪೀಠದ ಅಧ್ಯಕ್ಷ ಶಿವಯೋಗಿ ಸಿ ಕಳಸದ ಭಾಗವಹಿಸುವರು.ರಾಜಶೇಖರ ಕೋಟಿ ಪ್ರಶಸ್ತಿ–ಚಿತ್ರದುರ್ಗದ ಚಿಕ್ಕಪ್ಪನಹಳ್ಳಿ ಷಣ್ಮುಖ, ವಿಶೇಷ ಪ್ರಶಸ್ತಿಯನ್ನು ಶ.ಮಂಜುನಾಥ್, ರವಿಮಲ್ಲಾಪುರ, ಎಸ್.ಬಿ.ರವಿಕುಮಾರ್ (ರವಿ ಉಗ್ರಾಣ) ಹೆಚ್. ರಾಮಚಂದ್ರ ಅವರನ್ನು ಆಯ್ಕೆ ಮಾಡಲಾಗಿದೆ. ಸಮಾರಂಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರದ ಸಂಘದ ರಾಜ್ಯ ಪದಾಧಿಕಾರಿಗಳು, ಚಿತ್ರದುರ್ಗ ಜಿಲ್ಲಾ ಘಟಕದ ಪದಾಧಿಕಾರಿಗಳು, ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ ಪತ್ರಕರ್ತರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಲೋಕಸಭಾ ಚುನಾವಣೆ: 2 ನಾಮಪತ್ರ ಸಲ್ಲಿಕೆ

» ತುಮಕೂರು

ಲೋಕಸಭಾ ಕ್ಷೇತ್ರ ಚುನಾವಣೆಗೆ ಸಂಬಂಧಿಸಿದಂತೆ ಮಾರ್ಚ್ 28ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಮಾರ್ಚ್ 30, 2024ರಂದು ಇಬ್ಬರು ಅಭ್ಯರ್ಥಿಗಳಿಂದ ಒಟ್ಟು 2 ನಾಮಪತ್ರಗಳು ಸಲ್ಲಿಕೆಯಾಗಿರುತ್ತವೆ. ತುಮಕೂರು ಲೋಕಸಭಾ ಕ್ಷೇತ್ರಕ್ಕೆ ಪಕ್ಷೇತರ ಅಭ್ಯರ್ಥಿಯಾಗಿ ಸಿದ್ದರಾಮೇಗೌಡ ಟಿ.ಬಿ.(58 ವರ್ಷ, ತಮ್ಮಡಿಹಳ್ಳಿ, ಮಸ್ಕಲ್ ಅಂಚೆ, ಪಿನ್ ಕೋಡ್–572122, ಗೂಳೂರು ಹೋಬಳಿ, ತುಮಕೂರು ತಾಲ್ಲೂಕು) ಹಾಗೂ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ಅಭ್ಯರ್ಥಿಯಾಗಿ ಪ್ರದೀಪ್ ಕುಮಾರ್ (34ವರ್ಷ, ಗಂಜಲಗುಂಟೆ, ತರೂರು ಅಂಚೆ, ಕಳ್ಳಂಬೆಳ್ಳ ಹೋಬಳಿ, ಶಿರಾ ತಾಲ್ಲೂಕು, ತುಮಕೂರು) ಅವರುಗಳು ಮಾರ್ಚ್ 30ರಂದು ನಾಮಪತ್ರ ಸಲ್ಲಿಸಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

## ಬಾಬು ಜಗಜೀವನ್ ರಾಂ 117 ನೇ ಜಯಂತಿ

» ದಾವಣಗೆರೆ

ಜಿಲ್ಲಾಢಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರಪಾಲಿಕೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಏಪ್ರಿಲ್ 5 ರಂದು ಬೆಳಗ್ಗೆ 11.30ಕ್ಕೆ ಜಿಲ್ಲಾಡಳಿತ ಭವನದ ತುಂಗಾಭದ್ರ ಸಭಾಂಗಣದಲ್ಲಿ ಡಾ. ಬಾಬು ಜಗಜೀವನ ರಾಂ ರವರ 117 ನೇ ಜಯಂತಿಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ. ತಿಳಿಸಿದ್ದಾರೆ.

# 3ಕ್ಕೆ ಪಕ್ಷೇತರರಾಗಿ ನನ್ನ ಪುತ್ರ ನಾಮಪತ್ರ ಸಲ್ಲಿಕೆ

» ಚಿತ್ರದುರ್ಗ

ನಾನು ಕಷ್ಟದಿಂದ ಬಂದ ವ್ಯಕ್ತಿ ನನಗೆ ಬಡತನ ಏನೆಂದು ಗೊತ್ತಿದೆ. ನಿನ್ನಂತೆ ಬಂಗಾರದ ಚಮಚ ಇಟ್ಟುಕೊಂಡು ಬಂದವನಲ್ಲ ಜನರ ಸಮಸ್ಯೆಗಳಿಗೆ ಸ್ಪಂದಿಸಿದ್ದರಿಂದ ಮತದಾರರು ಐದು ಬಾರಿ ನನ್ನನ್ನು ಶಾಸಕನನ್ನಾಗಿ ಆಯ್ಕೆ ಮಾಡಿದ್ದಾರೆ ಎಂದು ಹೊಳಲ್ಕೆರೆ ಶಾಸಕ ಎಂ. ಚಂದ್ರಪ್ಪ ಹೇಳಿದರು.

ಅವರು ಚಿತ್ರದುರ್ಗದ ಅವರ ನಿವಾಸದಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತಾನಾಡಿ, ನಾನು ನಿನ್ನ ಹೆಸರನ್ನು ಹೇಳದೆ ಸಾಮಾನ್ಯವಾಗಿ ಮಾತಾಡಿದ್ದೆ, ಆದರೆ ಕುಂಬಳಕಾಯಿ ಕಳ್ಳ ಎಂದರೆ ನಿನ್ಯಾಕೆ ಹೆಗಲು ಮುಟ್ಟಿಕೊಂಡು ನೋಡ್ತಿಯ, ನಿನ್ನೆ ಪತ್ರಿಕಾ ಗೋಷ್ಠಿಯಲ್ಲಿ ನನ್ನ ಬಗ್ಗೆ ಇಲ್ಲ ಸಲ್ಲದ ಆರೋಪಗಳನ್ನು ಮಾಡಿದ್ದಿಯಾ, ನಾನು ನಿಜವಾಗಿಯೂ ಬಡತನದಿಂದಲೇ ಬಂದಿದ್ದು, ಸೊಸೈಟಿಯಲ್ಲಿ ಅಕ್ಕಿ ಸೀಮೇಎಣ್ಣೆ ಮಾರಿ ಜೀವನ ಮಾಡಿದ್ದೇನೆ. ನಿನ್ನ ಹಾಗೆ ಕರೆಂಟ್ ಕಳವು ಮಾಡಿ ಬದುಕು ಸಾಗಿಸಿಲ್ಲ. ಎಷ್ಟೋ ಜನ ಬಡತನದಲ್ಲಿದ್ದವರು, ರಾಜಕೀಯಕ್ಕೆ ಬಂದು ದೊಡ್ಡವರಾಗಿದ್ದಾರೆ. ಕಾಂಗ್ರೆಸ್ ಪಕ್ಷ ನಿನಗೆ ಟಿಕೆಟ್ ಕೊಡದಿದ್ದರಿಂದ ಪಕ್ಷೇತರನಾಗಿ ನಿಂತು ಗೆದ್ದಿದ್ದಿಯಾ ಅಂದರೆ ಅಲ್ಲಿಯೂ ಸಹ ನಿನ್ನ ಯೋಗ್ಯತೆ ಗೊತ್ತಾಗಿದೆ ಎಂದರು.

ಜಿಲ್ಲೆಯಲ್ಲಿ ನಾನು ಎಲ್ಲೆ ಹೋದರೂ ಇತರೇ ರಾಜಕೀಯ ಪಕ್ಷದವರು ಕರೆದು ಟಿಕೆಟ್ ನೀಡುತ್ತಾರೆ. ನಿನಗೆ ಆ ಯೋಗ್ಯತೆ ಇಲ್ಲ. ಕಳೆದ ಚುನಾವಣೆಯಲ್ಲಿ 90 ಸಾವಿರ ಮತದಾರರು ನಿನ್ನನ್ನು ತಿರಸ್ಕರಿಸಿದ್ದಾರೆ. ನನ್ನ ಕ್ಷೇತ್ರದಲ್ಲಿ ಉತ್ತಮ ಕಾಮಗಾರಿಗಳನ್ನು ಮಾಡಿದ್ದೇನೆ. ಈಗಲು ಅಲ್ಲಿನ ಜನ ನನ್ನನ್ನು ನೆನೆಸುತ್ತಾರೆ.ಆದರೆ ನಿನ್ನ ಕ್ಷೇತ್ರದಲ್ಲಿ ಕಳಪೆ ಕಾಮಗಾರಿ ಮಾಡಿ ಅದನ್ನು ಒಡೆಯುವಂತೆ ಮಾಡಲಾಗಿದೆ. ಗುತ್ತಿಗೆದಾರರಿಂದ ಕಮಿಷನ್ ಪಡೆದು ಕ್ಷೇತ್ರದ ಮತದಾರರಿಗೆ ಮೋಸ ಮಾಡಿದ್ದಿಯಾ, ಹೊಳಲ್ಕೆರೆ ಕ್ಷೇತ್ರದಲ್ಲಿ ನೀನುಸತ್ತರೆ ನಿನ್ನ ಹೊರಲು ನಾಲ್ಕು ಜನ ಬರುವುದಿಲ್ಲ,ನನ್ನ ಮಗ ಯಾವಾಗಲೂ ಪೋತಪ್ಪ ನಾಯಕನೇ ಅವನಿಗಾಗಿ ಯಡಿಯೂರಪ್ಪ ಬಳಿ ಟಿಕೆಟ್ ಕೇಳಿದ್ದು ತಪ್ಪಾ? ನಿನ್ನನ್ನು ಯಡಿಯೂರಪ್ಪನವರು ಮಂತ್ರಿ ಮಾಡಲಿಲ್ಲ ಎಂದು ಕ್ಷೇತ್ರದಲ್ಲಿ ಅವರ ವಿರುದ್ಧ ಧಿಕ್ಕಾರಗಳನ್ನು ಕೂಗಿ ಟಯರ್‌ಗಳನ್ನು ಸುಡಿಸಿದ್ದು ಇನ್ನು ಮರೆತಿಲ್ಲ ಎಂದು ಚಂದ್ರಪ್ಪ ತಿಪ್ಪಾರೆಡ್ಡಿಯ ವಿರುದ್ಧ ಕಿಡಿ ಕಾರಿದರು. ಚಿತ್ರದುರ್ಗ ಸಾರಿಗೆ ಶೌಚಾಲಯದಲ್ಲೂ ಸಹ ಪರ್ಸೆಂಟೇಜ್ ಪಡೆಯುತ್ತಿಯಾ ಎಂದರೆ ನಿನ್ನ ಯೋಗ್ಯತೆ ಏನೆಂದು ಗೊತ್ತಾಗುತ್ತದೆ. ನಾನು ಐದು ಬಾರಿ ಶಾಸಕನಾಗಿದ್ದೇನೆ. ನಿನ್ನಷ್ಟೆ ಅರ್ಹತೆ ನನಗೂ ಇದೆ. ನಿನಗೆ ನಾನು ನಿನಗೆ ಅಣ್ಣನ ಸ್ಥಾನ ನೀಡಿದ್ದೆ, ನಿನ್ನ ಹೆಸರು ಹೇಳದೆ ಮಾತಾಡಿದ್ದೆ, ಆದರೆ ನೀನು ನನ್ನ ಬಗ್ಗೆ ಅವಹೇಳನಕಾರಿಯಾಗಿ ಮಾತಾನಾಡಿದ್ದಿಯಾ ಇದಕ್ಕೆ ತಕ್ಕ ಪ್ರತಿಫಲ ಮುಂದಿನ ದಿನಗಳಲ್ಲಿ ದೊರೆಯಲಿದೆ. ರೆಡ್ಡಿ ಸಮುದಾಯದಲ್ಲಿ ಜನಿಸಿದ ನೀನು ಸಂಘಟಿಸುವ ಬದಲಿಗೆ ಹೊಡೆಯುವ ಕೆಲಸ ಮಾಡುತ್ತಿದ್ದಿಯಾ, ಇದೇ ರೀತಿ ಬಿಜೆಪಿ ಪಕ್ಷ ಹೊಡೆಯುವ ಸಂಚು ಮಾಡಿದ್ದೀಯಾ ಎಂದು ದೂರಿದರು. ಮುಂದಿನ ದಿನಗಳಲ್ಲಿ ನೀನು ನನ್ನ ತಂಟೆಗೆ ಬರಬೇಡ, ನಾನು ಬರುವುದಿಲ್ಲ. ಹಾಗೇನಾದರು ಬಂದರೆ ನಿನ್ನ ಜಾತಕ ಬಿಚ್ಚಿಡುತ್ತೇನೆ ಎಂದು ಎಚ್ಚರಿಸಿದರು.



ಪ್ರಜಾಪ್ರಭುತ್ವದಲ್ಲಿ ಯಾವುದೂ ದೊಡ್ಡದಿಲ್ಲ. ಯಾರು ಬೇಕಾದರೂ ಸ್ಪರ್ಧಿಬಹುದು, ಮತದಾರರು ನಿನ್ನ ಆಳುಗಳಲ್ಲ, ನಿನ್ನನ್ನು ಅಧಿಕಾರದಿಂದ ಕೆಳಗಿಳಿಸಲು ಸೋಲಿಸಿದ್ದಾರೆ. ನನ್ನ ನೋವನ್ನು ನನ್ನ ಅಭಿಮಾನಿಗಳಮುಂದೆ ತೋಡಿಕೊಂಡಿದ್ದೇನೆ. ಇದನ್ನು ಕೇಳುವ ಹಕ್ಕು ನಿನಗಿಲ್ಲ. ಮುಂದಿನ ದಿನಗಳಲ್ಲಿ ಉತ್ತಮನಾಗಿ ಬಾಳು ಎಂದ ಅವರು ಎಂಎಲ್‌ಸಿ ನವೀನ್ ಬಗ್ಗೆ ಮಾತಾಡಿ, ಹೊಸದುರ್ಗ ವಿಧಾನಸಭಾ ಚುನಾವಣೆಯಲ್ಲಿ ಲಿಂಗಮೂರ್ತಿಗೆ ಟಿಕೆಟ್ ಕೊಡುತ್ತೇನೆ ಎಂದು ಯಡಿಯೂರಪ್ಪ ಹೇಳಿದರೆ ನೀನು ಆತನ ಹತ್ತಿರ ಹಣವಿಲ್ಲ ಜನ ಬೆಂಬಲವಿಲ್ಲ ಟಿಕೆಟ್ ಕೊಡಬೇಡಿ ಎಂದು ನೇರವಾಗಿ ಹೇಳುವ ಮೂಲಕ ಟಿಕೆಟ್ ತಪ್ಪಿಸಿದ್ದಿಯಾ, ನಿನ್ನ ತಾಯಿ ತಾಲೂಕು ಪಂಚಾಯಿತಿ ಸದಸ್ಯರಾಗಿದ್ದಾಗ ಅದಕ್ಕೆ ಉಮಾಪತಿ ಕಾರಣ. ಇದನ್ನು ಮರೆಯದೆ ಆತನ ಫೋಟೋವನ್ನು ಮನೆಯಲ್ಲಿ ಹಾಕಿಕೊ. ಇದಲ್ಲದೆ ರಾಜಕೀಯವಾಗಿ ಶಕ್ತಿ ತುಂಬಿದ್ದು ಉಮಾಪತಿಯೇ, ನಿನ್ನ ಚುನಾವಣೆಯಲ್ಲಿ ಹೆಚ್ಚು ಶ್ರಮ ಹಾಕಿದ್ದೆ ಅದನ್ನು ಮರೆಯಬೇಡ, ನಾನು ನನ್ನ ಮಗನ ತಂಟೆಗೆ ಬಂದರೆ ಪರಿಣಾಮ ನೆಟ್ಟಗಿರಲ್ಲ ಎಂದು ಎಚ್ಚರಿಸಿದರು.

ವಿಧಾನ ಪರಿಷತ್ ಸದಸ್ಯರಾದ ರವಿಕುಮಾರ್, ಮನೆಗೆ ಭೇಟಿ ಮಾಡಿದ್ದು, ಸಂಧಾನಕ್ಕೆ ಪ್ರಯತ್ನ ನಡೆಸಿದ್ದಾರೆ. ಆದರೆ ನಾವು ಯಾವುದಕ್ಕೂ ಬಗ್ಗಿಲ್ಲ. ನಮ್ಮ ಪಾಲಿನ ಹಕ್ಕನ್ನು ಕೇಳಿದ್ದೇವೆ. ಏಪ್ರಿಲ್ 3 ರಂದು ಪಕ್ಷೇತರರಾಗಿ ನನ್ನ ಪುತ್ರ ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ನಾಮಪತ್ರ ಸಲ್ಲಿಸಲಿದ್ದಾನೆ. ಕ್ಷೇತ್ರವನ್ನು ಸುತ್ತಾಡಿರುವ ರಘುಚಂದನ್‌ಗೆ ಎಲ್ಲಾ ಸಮಾಜದವರು ಬೆಂಬಲವನ್ನು ಸೂಚಿಸಿದ್ದಾರೆ.

ಇದೇ ಸಮಯದಲ್ಲಿ ನಗರಸಭಾ ಸದಸ್ಯರಾದ ಬಾಸ್ಕರ್, ಇಪ್ಕೋದ ಸಂಜೀವ್ ಕುಮಾರ್, ಅಡಿಕೆ ಉದ್ಯಮಿ ಲವ ಕುಮಾರ್, ಬೋವಿ ಸಮಾಜದ ಮುಖಂಡ ಮೋಹನ್ , ಬಿಜೆಪಿಯ ರತ್ನಮ್ಮ, ಮಂಡಲ ಅಧ್ಯಕ್ಷ ಸಿದ್ದೇಶ, ಜಿಪಂ ಮಾಜಿ ಸದಸ್ಯರಾದ ಮಹೇಶ್, ತಿಪ್ಪೇಸ್ವಾಮಿ,ಮುಖಂಡರಾದ ಬಸವರಾಜ್, ಮುರುಗೇಶ್, ಈಶಣ್ಣ,ಮಹಂತೇಶ್, ಬಸವಯ್ಯ, ಸಿದ್ದರಾಮಣ್ಣ ಸೇರಿದಂತೆ ಇತರರಿದ್ದರು.

# ಚೆಕ್‌ಪೋಸ್ಟ್‌ಗಳಿಗೆ ಜಿ.ಪಂ ಸಿಇಓ ಭೇಟಿ, ಪರಿಶೀಲನೆ

» ಚಿತ್ರದುರ್ಗ

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಸ್ಥಾಪಿಸಲಾಗಿರುವ ಜಿಲ್ಲೆಯ ವಿವಿಧ ಚೆಕ್‌ಪೋಸ್ಟ್‌ಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್. ಜೆ.ಸೋಮಶೇಖರ್ ಅವರು ಭಾನುವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಜಿಲ್ಲೆಯ ಚಳ್ಳಕೆರೆ ನಗರದ ಕೆಇಬಿ ಚೆಕ್‌ಪೋಸ್ಟ್, ಬಳ್ಳಾರಿ ರಸ್ತೆಯ ನಾಯಕನಹಟ್ಟಿ ಕ್ರಾಸ್ ಚೆಕ್‌ಪೋಸ್ಟ್ ಹಾಗೂ ಚಳ್ಳಕೆರೆ ತಾಲ್ಲೂಕಿನ ಗಡಿಭಾಗದ ನಾಗಪ್ಪನಹಳ್ಳಿ ಗೇಟ್, ಜಾಜೂರು, ಬೋಗೇಳರಹಟ್ಟಿ ಚೆಕ್‌ಪೋಸ್ಟ್‌ಗೆ ಹಾಗೂ ಮೊಳಕಾಲ್ಮುರು ತಾಲ್ಲೂಕಿನ ಗಡಿಭಾಗದ ಕಣಕುಪ್ಪೆ ಕ್ರಾಸ್, ಎದ್ದಲಬೊಮ್ಮನಹಟ್ಟಿ, ಉಡೇವು, ಮಲ್ಲಾಸಮುದ್ರ, ಬೀವಿನಾಗೊಂಡನಹಳ್ಳಿಂಉ ಚೆಕ್‌ಪೋಸ್ಟ್‌ಗಳಿಗೆ ಭೇಟಿ ನೀಡಿ, ಅಲ್ಲಿನ ಸ್ಥಿತಿಗತಿಯನ್ನು ಪರಿಶೀಲಿಸಿದರು.



ಚುನಾವಣೆ ಅಕ್ರಮಗಳನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ವಿವಿಧೆಡೆ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದ್ದು, ಈ ಚೆಕ್‌ಪೋಸ್ಟ್‌ಗಳಲ್ಲಿನ ಅಧಿಕಾರಿ, ಸಿಬ್ಬಂದಿಯ ಹಾಜರಾತಿ, ಕಾರ್ಯ ವೈಖರಿ, ಕುಡಿಯುವ ನೀರು ವ್ಯವಸ್ಥೆ ಸೇರಿದಂತೆ ಚೆಕ್‌ಪೋಸ್ಟ್‌ಗಳಲ್ಲಿನ ಮೂಲಸೌಕರ್ಯದ ಬಗ್ಗೆ ಮಾಹಿತಿ ಪಡೆದ ಅವರು, ಚುನಾವಣಾ ಆಯೋಗದ ನಿರ್ದೇಶನದಂತೆ ಚೆಕ್‌ಪೋಸ್ಟ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಾರ್ಯ ನಿರ್ವಹಿಸಬೇಕು. ಬಿಸಿಲಿನ ಝಳ ಹೆಚ್ಚಾಗಿರುವುದರಿಂದ ನಿಮ್ಮಗಳ ಆರೋಗ್ಯ ಕಾಪಾಡಿಕೊಳ್ಳುವುದಕ್ಕೂ ಆದ್ಯತೆ ನೀಡಬೇಕು ಎಂದು ಹೇಳಿದರು.ಚೆಕ್‌ಪೋಸ್ಟ್ ಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ಎಸ್. ಜೆ.ಸೋಮಶೇಖರ್ ಅವರು ಅಧಿಕಾರಿಗಳೊಂದಿಗೆ ತೆರಳಿ, ಕಾರು, ಬಸ್ಸು, ಟ್ರಕ್ ಸೇರಿದಂತೆ ವಿವಿಧ ವಾಹನಗಳನ್ನೂ ತಪಾಸಣೆ ಮಾಡಿದರು. ವಾಹನಗಳನ್ನು ತಪಾಸಣೆ ಮಾಡುವ ಸಂದರ್ಭದಲ್ಲಿ ಚುನಾವಣೆ ಕುರಿತು ತಿಳುವಳಿಕೆ ಹೇಳಿ, ಪ್ರಯಾಣಿಕರೊಂದಿಗೆ ಸೌಜನ್ಯದೊಂದಿಗೆ ಮಾತನಾಡ 'ಬೇಕು ಎಂದು ಚೆಕ್‌ಪೋಸ್ಟ್ ಅಧಿಕಾರಿ ಹಾಗೂ ಸಿಬ್ಬಂದಿಗೆ ಸಲಹೆ ನೀಡಿದ ಅವರು, ವಾಹನ ತಪಾಸಣೆಯ ನಂತರ ಪ್ರತಿಯೊಬ್ಬ ಅರ್ಹ ಮತದಾರರು ತಪ್ಪದೇ ಮತಚಲಾಯಿಸುವಂತೆ ಪ್ರೇರೇಪಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ತಿಮ್ಮಪ್ಪ, ಚಳ್ಳಕೆರೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಣಪ್ಪ, ಮೊಳಕಾಲ್ಮುರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ್ ಸೇರಿದಂತೆ ಮತ್ತಿತರರು ಇದ್ದರು.

## ವಾಲ್ಮೀಕಿ ಸಮುದಾಯವನ್ನು ನಿರ್ಲಕ್ಷ್ಯ ಮಾಡಿದರೆ ಚುನಾವಣೆಯಲ್ಲಿ ವ್ಯತಿರಿಕ್ತ ಪರಿಣಾಮ: ಮಾಜಿ ಶಾಸಕ ತಿಪ್ಪೇಸ್ವಾಮಿ



» ಚಳ್ಳಕೆರೆ

ಚಿತ್ರದುರ್ಗ ಲೋಕಸಭೆ ಅಭ್ಯರ್ಥಿ ವಾಲ್ಮೀಕಿ ಸಮುದಾಯವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂಬುವುದು ನಮ್ಮ ಆಗ್ರಹವಾಗಿದೆ ಎಂದು ವಾಲ್ಮೀಕಿ ಸಮುದಾಯದ ಹಿರಿಯ ಮುಖಂಡ, ಮಾಜಿ ಶಾಸಕ ನೇರಲಗುಂಟೆತಿಪ್ಪೇಸ್ವಾಮಿ ತಿಳಿಸಿದರು.

ಅವರು, ಭಾನುವಾರ ನಗರದ ಖಾಸಗಿ ಕಚೇರಿಯಲ್ಲಿ ಪಕ್ಷದ ಮುಖಂಡರು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು. ರಾಜ್ಯವೂ ಸೇರಿದಂತೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ವಾಲ್ಮೀಕಿ ಸಮುದಾಯದ ಮತಗಳು ಸುಮಾರು 6ಲಕ್ಷಕ್ಕೂ ಹೆಚ್ಚಿವೆ. ಕಳೆದ ಬಾರಿ ಸಹ ಸಂಸದ ಎ.ನಾರಾಯಣಸ್ವಾಮಿಯವರಿಗೆ ನಾವೆಲ್ಲರೂ ಬೆಂಬಲ ನೀಡಿದ್ದೇವು. ಆದರೆ, ಅವರು ಚುನಾವಣೆಯಲ್ಲಿ ಗೆಲುವು ಸಾಧಿಸಿದ ನಂತರ ಸೂಕ್ತವಾಗಿ ಸ್ಪಂದಿಸಲಿಲ್ಲ. ಈಗ ಗೋವಿಂದಕಾರಜೋಳ ಅಭ್ಯರ್ಥಿಯಾಗಿದ್ದು, ಅವರೂ ಸಹ ಈ ಭಾಗದ ನಾಯಕ ಸಮುದಾಯ ಮುಖಂಡರಿಗೆ ಯಾವುದೇ ಮಾಹಿತಿ ನೀಡಿಲ್ಲ, ಇದರಿಂದ ಎಲ್ಲರಲ್ಲೂ ಅಸಮದಾನವಿದೆ. ಮುಂದಿನ ದಿನಗಳಲ್ಲೂ ಎಲ್ಲರನ್ನೂ ಒಟ್ಟಿಗೆ ಕರೆದುಕೊಂಡು ಹೋಗುವ ಕೆಲಸವಾಗಬೇಕೆಂಬುವುದೇ ನಮ್ಮ ಆಗ್ರಹವಾಗಿದೆ ಎಂದರು.

ವಿಶ್ವಹಿಂದೂಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ಮತದಾನಕ್ಕೆ ಇನ್ನೂ ಕೇವಲ ಕೆಲವೇ ದಿನಗಳು ಬಾಕಿ ಇವೆ. ಆದರೆ, ಸಮುದಾಯದ ಪಕ್ಷದ ಮುಖಂಡರಿಗೆ ಆಹ್ವಾನ ನೀಡದೇ ಇದ್ದರೆ ಚುನಾವಣೆಯಲ್ಲಿ ಬೇರೆ ಪರಿಣಾಮ ಉಂಟಾಗುವುದು ಸಹಜ. ನಾನು ಸಹ ಪಕ್ಷದ ಮುಖಂಡರಲ್ಲಿ ಮನವಿ ಮಾಡಿ ಅಭ್ಯರ್ಥಿ ಗೋವಿಂದಕಾರಜೋಳರವರು ವಾಲ್ಮೀಕಿ ಸಮುದಾಯವನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವಂತೆ ಮನವಿ ಮಾಡುತ್ತೇನೆಂದರು.



ಮಂಡ್ಯ ಸಂಸದೆ ಸುಮಲತಾ ಅಂಬರೀಷ್ ಅವರ ಬೆಂಗಳೂರಿನ ಜೆ ಪಿ ನಗರ ನಿವಾಸಕ್ಕೆ ಮಾಜಿ ಮುಖ್ಯಮಂತ್ರಿ ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರದ ಬಿಜೆಪಿ, ಜೆಡಿಎಸ್ ಮೈತ್ರಿ ಅಭ್ಯರ್ಥಿ ಹೆಚ್ ಡಿ ಕುಮಾರಸ್ವಾಮಿ ಅವರು ಭಾನುವಾರ ಭೇಟಿ ನೀಡಿ ಮಾತನಾಡಿದರು

ಪ್ರಮುಖ ಸುದ್ದಿ

### ಮತದಾನ ಪ್ರಕ್ರಿಯೆಯಲ್ಲಿ ಎಲ್ಲಾ ಮತದಾರರು ಕಡ್ಡಾಯವಾಗಿ ಪಾಲ್ಗೊಳ್ಳುವ ಮೂಲಕ ಸಂವಿಧಾನಬದ್ಧ ಹಕ್ಕು ಚಲಾಯಿಸಿ

# ಲೋಕಸಭಾ ಚುನಾವಣೆಗೆ ಏ.26ರಂದು ಮತದಾನ

» ಚಳ್ಳಕೆರೆ

ಲೋಕಸಭಾ ಚುನಾವಣೆಗೆ ಮತದಾನ ಮಾಡಲು ಇನ್ನು ಕೇವಲ 25 ದಿನಗಳು ಮಾತ್ರ ಬಾಕಿ ಇದ್ದು ಏ.26ರ ಮತದಾನ ಪ್ರಕ್ರಿಯೆಯಲ್ಲಿ ಕ್ಷೇತ್ರದ ಅತಿಹೆಚ್ಚು ಮತದಾರರು ಹೆಚ್ಚು ಮತದಾನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ಈ ನಿಟ್ಟಿನಲ್ಲಿ ಜನರಲ್ಲಿ ಮತದಾನ ಜಾಗೃತಿಯನ್ನು ಮೂಡಿಸುವ ಕಾರ್ಯಕ್ಕೆ ಎಲ್ಲರೂ ಸಹಕರಿಸಬೇಕೆಂದು ತಾಲ್ಲೂಕು ಸ್ವೀಫ್ ಸಮಿತಿ ಅಧ್ಯಕ್ಷ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಬಿ.ಎಸ್.ಲಕ್ಷ್ಮಣ್ ತಿಳಿಸಿದರು.

ಅವರು, ತಾಲ್ಲೂಕು, ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ತಾಲ್ಲೂಕು ಸ್ವೀಪ್ ಸಮಿತಿ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿದರು. ತಾಲ್ಲೂಕು ಮಟ್ಟದ ವಿವಿಧ ಅಧಿಕಾರಿಗಳು, ಸಿಬ್ಬಂದಿವರ್ಗ ಅಂಗನವಾಡಿ, ಆಶಾ ಕಾರ್ಯಕರ್ತೆಯರು ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಜಾಗೃತಿಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.





ಈ ಸಂದರ್ಭದಲ್ಲಿ ಮೆರವಣಿಯುದ್ದಕ್ಕೂ ಘೋಷಣೆ ಕೂಗಿದ ಕಾರ್ಯಕರ್ತರು, ಸಂವಿಧಾನಬದ್ಧವಾಗಿ ನಮಗೆ ಲಭಿಸಿರುವ ಮತದಾನದ ಹಕ್ಕನ್ನು ಎಲ್ಲರೂ ತಪ್ಪದೆ ಸದುಪಯೋಗಪಡಿಸಿಕೊಳ್ಳಬೇಕು. ಪ್ರಜಾಪ್ರಭುತ್ವವನ್ನು ಎತ್ತಿಹಿಡಿಯಲು ಮತದಾನವೊಂದೇ ನಮಗೆ ಇರುವ ಹಕ್ಕು. ಈ ಹಕ್ಕನ್ನು ನ್ಯಾಯಬದ್ಧವಾಗಿ ಚಲಾವಣೆ ಮಾಡುವುದಲ್ಲಿ ನಾವೆಲ್ಲರೂ ಮುಂದಾಗಬೇಕು. ಉತ್ತಮ ಆಡಳಿತ ಪಡೆಯಲು ಸ್ವಯಂಸ್ಪೂರ್ತಿಯಿಂದ ನಾವೆಲ್ಲರೂ ಪಾಲ್ಗೊಳ್ಳಬೇಕು, ಮತದಾನ ಮಾಡುವಂತೆನೆರೆಹೊರೆಸ್ನೇಹಿತರಲ್ಲಿಮನವಿ ಮಾಡಿಕೊಳ್ಳಬೇಕು. ಮತದಾನದಿಂದ ದೂರ ಉಳಿದರೆ ನಮ್ಮಹಕ್ಕಿನಿಂದ ನಾವೇ ವಂಚಿತರಾಗುತ್ತೇವೆಂಬುವುದುನ್ನು ಮರೆಯಬಾರದು. ಮತದಾನ ಅತಿ ಶ್ರೇಷ್ಠ ದಾನ ಎಂದು ಘೋಷಣೆ ಕೂಗಿದರು.

ತಹಶೀಲ್ದಾರ್ ರೇಹಾನ್‌ಪಾಷ, ಪೌರಾಯುಕ್ತ ಜೀವನ್‌ಕಟ್ಟಿಮನಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್. ಕಾಶಿ, ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಸಂತೋಷ್, ಸಂಪತ್, ನಗರಸಭೆ ಅಧಿಕಾರಿ ವರ್ಗ ಜಾಗೃತಿ ರ್ಯಾಲಿಯಲ್ಲಿ ಭಾಗವಹಿಸಿದ್ದರು. ವಾಲ್ಮೀಕಿ ವೃತ್ತದಿಂದ ಪ್ರಾರಂಭವಾಗಿ ಅಂಬೇಡ್ಕರ್ ವೃತ್ತದ ಮೂಲಕ ನೆಹರೂ ವೃತ್ತಕ್ಕೆ ಆಗಮಿಸಿತು. ನೆಹರೂ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಮತದಾನ ಜಾಗೃತಿ ಮೂಡಿಸಲಾಯಿತು.

# ನಾನು ಜವಾಬ್ದಾರ ನೀವು ಜವಾಬ್ದಾರರು



## ವಿಶ್ವ ಗುರು ಕನಸು ಕಾಣುವ ಮುನ್ನ ಒಮ್ಮೆ ಇಲ್ಲಿ ನೋಡಿ









ಇ ಕಲುಷಿತ ನೀರು ಕುಡಿದು ಸಾವು ಸಂಭವಿಸುತ್ತಿರುವ ಘಟನೆಗಳು ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗುತ್ತಿದೆ. ಅದರಲ್ಲೂ ಕಲ್ಯಾಣ ಕರ್ನಾಟಕದ ಭಾಗದಲ್ಲಿ ಇದು ಗಂಭೀರ ಸಮಸ್ಯೆ ಸೃಷ್ಟಿಸಿದೆ.

ಕಳೆದ ಮೂರು ನಾಲ್ಕು ವರ್ಷಗಳಿಂದ ರಾಜ್ಯದ ಬಹುತೇಕ ಭಾಗಗಳಲ್ಲಿ ಉತ್ತಮ ಮಳೆಯಾಗಿದೆ. ಮಳೆಯ ನೀರು ಅಥವಾ ಅಂತರ್ಜಲದ ನೀರು ಕುಡಿಯಲು ಅತ್ಯಂತ ಶುದ್ಧವಾಗಿರುತ್ತದೆ. ಆದರೆ ಅದನ್ನು ಸಂಗ್ರಹಿಸುವ ಮತ್ತು ಮರು ಬಳಕೆ ಮಾಡುವ ವ್ಯವಸ್ಥೆ ಮಾತ್ರ ತೀರಾ ಹದಗೆಟ್ಟಿದೆ.

ನಗರ ಮತ್ತು ಪಟ್ಟಣ ಪ್ರದೇಶಗಳ ಮಧ್ಯಮ ಮತ್ತು ಶ್ರೀಮಂತರ ಮನೆಗಳಲ್ಲಿ ವಾಟರ್ ಫಿಲ್ಟರ್ ಗಳನ್ನು ಉಪಯೋಗಿಸುವುದರಿಂದ ಕಲುಷಿತ ನೀರು ಸಹ ಸ್ವಲ್ಪ ಮಟ್ಟಿಗೆ ಕುಡಿಯಲು ಯೋಗ್ಯವಾಗಿದೆ. ಆದರೂ ನೀರಿನಿಂದಲೇ ಈಗಲೂ ಬಹುತೇಕ ರೋಗಗಳು ಬಹುಬೇಗ ಹರಡುತ್ತಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ಫ್ಲೋರೈಡ್ ಮಿಶ್ರಿತ ನೀರು, ಕೆಲವು ಭಾಗಗಳಲ್ಲಿ ಇತರ ಹಾನಿಕಾರಕ ನೀರಿನ ಪರಿಣಾಮ ಅತಿಹೆಚ್ಚು ಕಿಡ್ನಿ ಸ್ಟೋನ್, ಅತಿಸಾರ ಪ್ರಕರಣಗಳು ವರದಿಯಾಗುತ್ತಿದೆ.

ವಿಜ್ಞಾನಬಹಳಷ್ಟುಮುಂದುವರಿಯುತ್ತಿದೆ, ಸಾರಿಗೆ ಸಂಪರ್ಕ ಅತಿ ವೇಗ ಪಡೆಯುತ್ತಿದೆ, ರಾಜ್ಯದ ಬಜೆಟ್ 3 ಲಕ್ಷ ಕೋಟಿಗೂ ಹೆಚ್ಚು ದಾಟಿ ಮುನ್ನಡೆಯುತ್ತಿದೆ, ರಾಜ್ಯದ ಸಣ್ಣ ಗ್ರಾಮಗಳಲ್ಲಿ ಸಹ ಇಂಟರ್ನೆಟ್ ಸೌಲಭ್ಯ ದೊರೆಯುತ್ತಿದೆ, ಎಲ್ಲರಿಗೂ ಬ್ಯಾಂಕ್ ಖಾತೆಗಳಿವೆ. ಆದರೆ ಕುಡಿಯಲು ಶುದ್ಧ ನೀರಿಗಾಗಿ ಪರದಾಡುವಂತಾಗಿರುವುದು ಮಾತ್ರ ವಿಷಾದನೀಯ.

ಫ್ಲೈ ಓವರ್ ನಿರ್ಮಿಸಲು, ವಿಮಾನ ನಿಲ್ದಾಣನಿರ್ಮಿಸಲು,ಮೆಟ್ರೋನಿರ್ಮಿಸಲು, ದಶಪಥ ರಸ್ತೆ ನಿರ್ಮಿಸಲು ಕೋಟಿ ಕೋಟಿ ಹಣ ಖರ್ಚು ಮಾಡುವ ಸರ್ಕಾರಗಳು, ಟೆಂಪಲ್ ರನ್ ಮಾಡಲು ಖಾಸಗಿ ವಿಮಾನಗಳನ್ನೇ ಬಾಡಿಗೆ ಪಡೆಯುವ ಮಂತ್ರಿಗಳು ಕನಿಷ್ಠ ಶುದ್ಧ ಕುಡಿಯುವ ನೀರಿಗಾಗಿ ಸರ್ಕಾರದ ಬೊಕ್ಕಸದಿಂದಲೇ ಒಂದು ಆರೋಗ್ಯಕರವಾದ ವ್ಯವಸ್ಥೆ ಮಾಡಲು ವಿಫಲವಾಗಿದೆ ಎಂಬುದು ನಾಚಿಕೆಗೇಡಿನ ವಿಷಯ. ಹೋಗಲಿ ಅಧಿಕಾರಿ ವರ್ಗದವರಾದರು ಮುನ್ನೆಚ್ಚರಿಕೆ ವಹಿಸಬೇಕಲ್ಲವೇ....

ನಮ್ಮ ಅರಿವಿನ ಅಂಚಿನಲ್ಲಿಯೇ ಮಕ್ಕಳು ಕಲುಷಿತ ನೀರು ಕುಡಿದು ಸಾಯುತ್ತಿದ್ದಾರೆ ಎಂದರೆ ಯಾವ ಮಂತ್ರಿ, ಯಾವ ನ್ಯಾಯಾಧೀಶ, ಯಾವ ಜಿಲ್ಲಾಧಿಕಾರಿ, ಯಾವ ಪತ್ರಕರ್ತ, ಯಾವ ಸ್ವಾಮೀಜಿ, ಯಾವ ಹೋರಾಟಗಾರ, ಯಾವ ಬರಹಗಾರ ಎಷ್ಟೇ ಪ್ರಖ್ಯಾತನಾದರು, ಸಾಧಕನಾದರು ಪ್ರಯೋಜನವೇನು.

ಅತ್ಯಂತ ಸಣ್ಣ ಗ್ರಾಮಗಳಲ್ಲಿ ಸಹ ಇಂದು ಕಡಿಮೆ ಬೆಲೆಗೆ ಮಿನರಲ್ ವಾಟರ್ ಸಿಗುತ್ತದೆ ಅಥವಾ ಯಾರ ಮನೆಯಲ್ಲಾದರೂ ಮಡಿಕೆಗಳಲ್ಲಿ ಮತ್ತು ಪಾತ್ರೆಗಳಲ್ಲಿ ಸಂಗ್ರಹಿಸಿದ ಸ್ವಲ್ಪ ಮಟ್ಟಿಗೆ ಉತ್ತಮ ನೀರು ಸಿಗುತ್ತದೆ ಅಥವಾ ಸ್ಥಳೀಯರಿಗೆ ಅಥವಾ ಗ್ರಾಮ ಪಂಚಾಯತಿ ಸದಸ್ಯರಿಗೆ ಕುಡಿಯಲು ಯೋಗ್ಯವಾದ ನೀರು ಯಾವುದು ಅಥವಾ ಕಲ್ಮಶ ನೀರು ಯಾವುದು ಎಂದು ತಿಳಿದಿರುತ್ತದೆ. ಅವರು ಯಾರೂ ಈ ಅಸಹಾಯಕ – ಅಮಾಯಕ ಬಡ ಮಕ್ಕಳು ಕಲುಷಿತ ನೀರು ಕುಡಿಯುವುದನ್ನು ತಡೆಯಲು ಸಾಧ್ಯವಾಗಲಿಲ್ಲ ಎಂದರೆ ನಮ್ಮ ಸಮಾಜದ ಒಟ್ಟು ಕಾರ್ಯ ನಿರ್ವಹಣಾ ವ್ಯವಸ್ಥೆಯ ಬಗ್ಗೆಯೇ ಅನುಮಾನ ಮೂಡುತ್ತದೆ.

ಶುದ್ಧ ನೀರು ಯಾವುದು, ಅದು ಎಲ್ಲಿ ಸಿಗುತ್ತದೆ, ಇತರೆ ಕೆಲಸಗಳಿಗೆ ಉಪಯೋಗಿಸುವ ನೀರು ಯಾವುದು, ವಿಷಯುಕ್ತ ಕೆಟ್ಟ ನೀರು ಯಾವುದು ಎಂಬ ಸಾಮಾನ್ಯ ತಿಳಿವಳಿಕೆಯೇ ಇನ್ನೂ ಬಹುತೇಕ ಗ್ರಾಮಗಳಲ್ಲಿ ಇಲ್ಲ ಎನ್ನುವುದಾದರೆ ಸರ್ಕಾರಗಳ ನಿರ್ವಹಣೆಗಾಗಿ ಸಾರ್ವಜನಿಕ ಖಜಾನೆಯಿಂದ ಖರ್ಚು ಮಾಡುತ್ತಿರುವ ಹಣ ವ್ಯರ್ಥವಾಗುತ್ತಿದೆ ಎಂದೇ ಪರಿಗಣಿಸಬೇಕು.

ಇದು ತುಂಬಾ ಚಿಕ್ಕ ವಿಷಯ ಎನಿಸಬಹುದು. ಆದರೆ ವಿಶ್ವದ ಇತರೆ ಮುಂದುವರೆದ ನಾಗರಿಕ ಸಮಾಜದ ದೇಶದವರು ಭಾರತದ ಕರ್ನಾಟಕದಲ್ಲಿ ಕಲುಷಿತ ನೀರು ಕುಡಿದು ಮಕ್ಕಳು ಸತ್ತಿದ್ದಾರೆ ಎಂಬ ವಿಷಯ ತಿಳಿದರೆ ಖಂಡಿತ ಅವರಿಗೆ ನಮ್ಮ ಬಗ್ಗೆ ಅಸಹ್ಯ ಭಾವನೆ ಬರಬಹುದು. ಯಥೇಚ್ಛ ನೈಸರ್ಗಿಕ ಸಂಪನ್ಮೂಲಗಳನ್ನು ಹೊಂದಿರುವ ಒಂದು ರಾಜ್ಯ ಕನಿಷ್ಠ ಶುದ್ಧ ಕುಡಿಯುವ ನೀರನ್ನು ಒದಗಿಸಲು ಸಾಧ್ಯವಾಗಿಲ್ಲ ಮತ್ತು ಮಕ್ಕಳಿಗೆ ಶುದ್ಧ ಅಥವಾ ಅಶುದ್ಧ ನೀರು ಯಾವುದು ಎಂಬ ತಿಳಿವಳಿಕೆಯೇ ನೀಡಿಲ್ಲ ಎಂದು ಕೋಪ ಬರಬಹುದು.

ಇದಕ್ಕೆ ಕೇವಲ ಸರ್ಕಾರ, ರಾಜಕೀಯ, ಅಧಿಕಾರಿಗಳು ಮಾತ್ರವಲ್ಲ. ಸ್ಥಳೀಯ ಜನರು ಸಹ ಜವಾಬ್ದಾರರು. ಅದರಲ್ಲೂ ಹಳ್ಳಿಗಳಲ್ಲಿ ಬಹುತೇಕ ಎಲ್ಲಾ ಜನರ ಮತ್ತು ವಾತಾವರಣದ ಪರಿಚಯ ಎಲ್ಲರಿಗೂ ಇರುತ್ತದೆ. ಆ ಹಳ್ಳಿಗೆ ಶುದ್ಧ ಕುಡಿಯುವ ನೀರಿನ ಮೂಲಗಳನ್ನು ಒದಗಿಸಿಕೊಳ್ಳುವ ಪ್ರಜ್ಞೆ ಜನರಿಗೂ ಇರಬೇಕು. ಸ್ಥಳೀಯ ಪ್ರತಿನಿಧಿಗಳನ್ನು ಒತ್ತಾಯ ಮಾಡಿ ಅತ್ಯಂತ ಪ್ರಮುಖ ಶುದ್ಧ ನೀರಿನ ವ್ಯವಸ್ಥೆ ಮಾಡಿಕೊಳ್ಳಬೇಕು.

ಹೌದು ಈಗಾಗಲೇ ಅನೇಕ ಊರುಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಇವೆ. ಆದರೆ ಅದನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ. ಕೆಲವು ಕೆಟ್ಟು ಹೋಗಿದೆ. ಸರ್ಕಾರಿ ಯೋಜನೆಗಳ ದುರಂತವೇ ಇದು. ಅದಕ್ಕೆ ನೇರ ಜವಾಬ್ದಾರಿ ಇರುವುದಿಲ್ಲ. ಸ್ಥಳೀಯ ಆಡಳಿತವನ್ನು ಇದಕ್ಕೆ ಹೊಣೆ ಮಾಡಿ ದಂಡ ವಿಧಿಸಬೇಕು.

ಶುದ್ಧ ಕುಡಿಯುವ ನೀರು ಪ್ರತಿಯೊಬ್ಬರ ಹಕ್ಕು. ಅದನ್ನು ನೀಡುವುದು ಸರ್ಕಾರದ ಕರ್ತವ್ಯ. ಅದಕ್ಕಾಗಿ ಒತ್ತಾಯ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ಇದು ಅತ್ಯಂತ ಸರಳ ಮತ್ತು ಸುಲಭ. ಆದರೆ ಇಚ್ಛಾ ಶಕ್ತಿ ಇಲ್ಲದ ಸ್ವಾರ್ಥ ಜನರ ನಡುವೆ ನಿರ್ಲಕ್ಷ್ಯದ ಸಾವುಗಳು ವ್ಯವಸ್ಥೆಯ ಬಹಿರಂಗ ಕೊಲೆಗಳೇ ಆಗಿವೆ. ನಾವು ನೀವು ಮೂಕ ಪ್ರೇಕ್ಷಕರು........



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068



Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T